

# ಸಿಹಿ ಕಹಿ


ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ
Editor: MARUTI BASAVANTAPPA HOSAMANI
Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ
ಬಾಗಲಕೋಟೆಯಿಂದ ಪ್ರಕಟಿತ
RNI REG No. : KARKAN/2016/75068

SIHI KAHI
KANNADA DAILY MORNING
BAGALKOT

Volume : 06 | Issue : 281 | Thursday 18-07-2024 | E-mail : maruti.b.hosamani76@gmail.com | Page: 4 | Price : Rs. 1/-


# ಸಾರ್ವಜನಿಕ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ ಜಿ,ಪಂ, ಸಿ.ಇ.ಓ ರಾಹುಲ್ ಶಿಂಧೆ ಸೂಚನೆ

**ಬೆಳಗಾವಿ :** ತಾಲೂಕಾ ಮಟ್ಟದ ಅಧಿಕಾರಿಗಳು ಸಮನ್ವಯ ದೊಂದಿಗೆ ಕಾರ್ಯ ನಿರ್ವಹಿಸುವುದರ ಮೂಲಕ ಸಾರ್ವಜನಿಕರ ಸಮಸ್ಯೆಗಳ ತ್ವರಿತ ಪರಿಹಾಕ್ಕೆ ಮುಂದಾಗಬೇಕು. ತಾಲೂಕುಗಳ ಅಭಿವೃದ್ಧಿಯಲ್ಲಿ ಕಾರ್ಯ ನಿರ್ವಾಹಕಅಧಿಕಾರಿಗಳಪಾತ್ರಮಹತ್ವದಾಗಿದ್ದು, ತಮ್ಮ ಜವಾಬ್ದಾರಿ ಅರಿತು ಸಮರ್ಪಕವಾಗಿ ಕೆಲಸ ಮಾಡಬೇಕು ಎಂದು ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ರಾಹುಲ ಶಿಂಧೆ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ ಕಾರ್ಯಾಲಯದ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಜಿಲ್ಲಾ ಹಾಗೂ ತಾಲೂಕಾ ಮಟ್ಟದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ವೀಡಿಯೋ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಾಲೂಕಾ ಮಟ್ಟದ ಅಧಿಕಾರಿಗಳು ತಮ್ಮ ತಾಲೂಕಾ ವ್ಯಾಪ್ತಿಯಲ್ಲಿ ನಿಯಮಿತವಾಗಿ ಸಂಚರಿಸಿ ತಮ್ಮ ಇಲಾಖೆಗಳಿಂದ ಜರುಗುತ್ತಿರುವ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿ ಕಾಮಗಾರಿಗಳನ್ನು ಕಾಲ ಮಿತಿಯೊಳಗಾಗಿ ಪೂರ್ಣ ಗೊಳಿಸುವಂತೆ ಕ್ರಮ ವಹಿಸುವದರ ಜೊತೆಗೆ ತಾಲೂಕುಗಳ ಅಭಿವೃದ್ಧಿಗೆ ಮುಂದಾಗುಂತೆ ತಿಳಿಸಿದರು.

ಈಗಾಗಲೇ ಪ್ರತಿ ತಾಲೂಕುಗಳಿಗೆ ನೋಡಲ್ ಅಧಿಕಾರಿಗಳನ್ನು ನೇಮಿಸಿಲಾಗಿದ್ದು, ಆಯಾ ನೋಡಲ್ ಅಧಿಕಾರಿಗಳು ಪ್ರತಿ ಮಾಹೆ ತಪ್ಪದೇ ತಾಲೂಕುಗಳಿಗೆ ಭೇಟಿ ನೀಡಿ ನಿಯಮಿತವಾಗಿ ಸಭೆ ಜರುಗಿಸಿ ವರದಿ ಸಲ್ಲಿಸಬೇಕು. ಮುಖ್ಯಮಂತ್ರಿಗಳ ಜನ ಸ್ಪಂದನ ಕಾರ್ಯಕ್ರಮದಲ್ಲಿ ಸ್ವೀಕೃತವಾಗುವ ದೂರುಗಳನ್ನುಆಯಾಇಲಾಖಾಅಧಿಕಾರಿಗಳು ಕೂಡಲೇ ಸ್ಪಂದಿಸಿ ಪರಿಹಾರ ಕಲ್ಪಿಸಬೇಕು.

ವಿವಿಧ ಇಲಾಖೆಗಳ ವಸತಿ ನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ಪಾವತಿಸ ಬೇಕಾದಂತಹ ವಿದ್ಯಾರ್ಥಿ ವೇತನ ಪಾವತಿಗೆ ಕೂಡಲೆ ಕ್ರಮ ವಹಿಸಬೇಕು. ವಿದ್ಯಾರ್ಥಿಗಳ ಆಧಾರ ಸೀಡಿಂಗ್ ಪ್ರಕ್ರಿಯೆ ಕೂಡಲೇ ಪೂರ್ಣಗೊಳಿಸಿ. ಹದಿನೈದು ದಿನ ದೊಳಗಾಗಿ ಬಾಕಿ ಇರುವ ವಿದ್ಯಾರ್ಥಿ ವೇತನ ಪಾವತಿಗೆ ಕ್ರಮ ವಹಿಸಬೇಕು.

ವಸತಿ ನಿಲಯಗಳ ಪ್ರವೇಶಾತಿಯಲ್ಲಿ ಯಾವುದೇ ಗೊಂದಲ ಗಳಾಗದಂತೆ ನಿಗಾವಹಿಸಬೇಕು. ಜಿಲ್ಲೆಯ ಎಲ್ಲಾ ವಸತಿ ನಿಲಯಗಳ ವಾರ್ಡನಗಳ ಸಭೆ ಜರುಗಿಸಿ ಕಾಲ ಮಿತಿಯೊಳಗಾಗಿ ಪ್ರವೇಶಾತಿ ಕುರಿತು ಸ್ವೀಕೃತವಾದಂತಹ ಅರ್ಜಿಗಳನ್ನು ಆನ್ ಲೈನ್ ನಲ್ಲಿ ದಾಖಲಿಸ ಬೇಕು. ವಸತಿ ನಿಲಯಗಳಲ್ಲಿನ ಸೌಕರ್ಯಗಳ ಕುರಿತು ಸಂಬಂಧಿಸಿದ ನೋಡಲ್ ಅಧಿಕಾರಿಗಳು ನಿಯಮಿತವಾಗಿ ಭೇಟಿ ನೀಡಿ ಪರಿಶೀಲಿಸಬೇಕು.

ಜಿಲ್ಲಾ ಹಾಗೂ ತಾಲೂಕಾ ಕೇಂದ್ರಗಳಲ್ಲಿ ಹೊಸದಾಗಿ ಮಂಜೂರಾಗಿರುವ ವಸತಿ ನಿಲಯಗಳ ಪ್ರಾರಂಭಕ್ಕೆ ಸ್ವಂತ ಕಟ್ಟಡ ಇಲ್ಲದೇ ಇರುವ ಪಕ್ಷದಲ್ಲಿ ಬಾಡಿಗೆ ಕಟ್ಟಡವನ್ನು ಪಡೆದು ಪ್ರಾರಂಭಿಸಲು ಕ್ರಮ ಜರುಗಿಸಬೇಕು. ಈಗಾಗಲೇ ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಸತಿ ನಿಲಯಗಳ ಬಾಡಿಗೆಯನ್ನು ಆಯಾ ತಿಂಗಳಿನಲ್ಲಿ ಪಾವತಿಗೆ ಕ್ರಮ ವಹಿಸಬೇಕು. ಎಲ್ಲಾ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರು ಪೂರೈಕೆ ಆಗಬೇಕು ಈ ಕುರಿತು ಸಂಬಂಧಿಸಿದ ನೋಡಲ್ ಅಧಿಕಾರಿಗಳು ಗಮನ ಹರಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ನಿರ್ದೇಶನ ನೀಡಿದರು.



ಕುಡಿಯುವ ನೀರು ಪರೀಕ್ಷೆಗೆ ನಿರ್ದೇಶನ – ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಬರಾಜು ಮಾಡಲಾಗುತ್ತಿರುವ ಕುಡಿಯುವ ನೀರಿನ ಪರೀಕ್ಷೆಗಳನ್ನು ನಿಯಮಿತವಾಗಿ ಜರುಗಿಸಬೇಕು. ಕುಡಿಯುವ ನೀರು ಸರಬರಾಜುಗೆ ಸಂಬಂಧಿಸಿದಂತೆ ಈಗಾಗಲೇ ಜಿಲ್ಲಾ ಮಟ್ಟದ ಟಾಸ್ಕ ಪೋರ್ಸ ಸಮಿತಿ ರಚಿಸಲಾಗಿದ್ದು, ತಾಲೂಕಾ ಮಟ್ಟದಲ್ಲಿ ಕೂಡ ಸಮಿತಿಗಳನ್ನು ರಚಿಸಿ ನೀರು ಪರೀಕ್ಷೆ, ತೆಗೆದು ಕೊಂಡ ಕ್ರಮಗಳ ಕುರಿತು ಸಮಗ್ರ ವರದಿ ನೀಡಬೇಕು ಎಂದು ಶಿಂಧೆ ಹೇಳಿದರು.

ನೀರು ಪರೀಕ್ಷೆ ನಂತರ ನೀರು ಕುಡಿಯಲು ಯೋಗ್ಯ ವಿಲ್ಲದಿದ್ದರೆ ಅಂತಹ ನೀರಿನ ಮೂಲಗಳ ಹತ್ತಿರ ಕೆಂಪು ಅಕ್ಷರಗಳಲ್ಲಿ ಸೂಚನಾ ಫಲಕವನ್ನು ಅಳವಡಿಸಬೇಕು. ಈ ಕಾರ್ಯದಲ್ಲಿ ಆರೋಗ್ಯ ಇಲಾಖೆ, ತಾಲೂಕಾ ಪಂಚಾಯತ ಹಾಗೂ ಗ್ರಾಮ ಪಂಚಾಯತಗಳು ಸಮನ್ವಯ ದೊಂದಿಗೆ ಕಾರ್ಯ ನಿರ್ವಹಿಸಬೇಕು.

ಮೇಲ್ಮಟ್ಟದ ಜಲ ಸಂಗ್ರಹಾಗಾರಗಳ ಸ್ವಚ್ಛತೆಗೆ ಹೆಚ್ಚಿನ ಗಮನ ಹರಿಸಬೇಕು. ನೀರಿನ ಮೂಲಗಳ ಮೂಲಕ ನೇರವಾಗಿ ಪೂರೈಕೆ ಆಗುವ ನೀರನ್ನು ಕಡ್ಡಾಯವಾಗಿ ಪರೀಕ್ಷೆಗೊಳಪಡಿಸಿ ಕುಡಿಯಲು ಯೋಗ್ಯ ವಿದ್ದಲ್ಲಿ ಮಾತ್ರ ಅಂತಹ ನೀರನ್ನು ಪೂರೈಸಬೇಕು ಕಲುಷಿತ ನೀರು ಪೂರೈಕೆಗೆ ಸಂಬಂಧಿಸಿದಂತೆ ಯಾವುದೇ ದೂರುಗಳು ಬಂದಲ್ಲಿ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಅಂಗನವಾಡಿ ಕೇಂದ್ರಗಳ ಸ್ಥಳಾಂತರಕ್ಕೆ ಸೂಚನೆ – ಶಿಥಿಲಾವಸ್ಥೆ ಯಲ್ಲಿರುವಂತಹ ಅಂಗನವಾಡಿ ಕಟ್ಟಡಗಳಲ್ಲಿ ಯಾವುದೇ ಕಾರಣಕ್ಕೂ ತರಗತಿಗಳನ್ನು ನಡೆಸ ಬಾರದು. ಅಂಗನವಾಡಿಗಳು ಖಾಸಗಿ ಒಡೆತನದ ಕಟ್ಟಡಗಳಲ್ಲಿ ನಡೆಯುತ್ತಿದ್ದರೆ ಅಂತಹ ಅಂಗನವಾಡಿ ಕೇಂದ್ರಗಳನ್ನು ಸರಕಾರಿ ಕಟ್ಟಡಗಳಿಗೆ ಸ್ಥಳಾಂತರಿಸ ಬೇಕು ಎಂದು ರಾಹುಲ್ ಶಿಂಧೆ ಅವರು ಅಧಿಕಾರಿಗಳಿಗೆ ತಿಳಿಸಿದರು.

ಸರಕಾರಿ ಶಾಲೆಯಲ್ಲಿ ಸುಸಜ್ಜಿತ ಕೋಣೆ ಹಾಗೂ ಮೂಲ ಸೌಕರ್ಯಗಳನ್ನು ಪರಿಶೀಲಿಸಿ ಸ್ಥಳಾಂತರಿಸಲು ಪ್ರಥಮ ಆದ್ಯತೆ ನೀಡಬೇಕು. ಯಾವುದೇ ಶಾಲೆಗಳಲ್ಲಿ ಸ್ಥಳಾವಕಾಶ ಇದ್ದರೂ ಸಹ ಅಂಗನವಾಡಿ ಕೇಂದ್ರ ಪ್ರಾರಂಭಕ್ಕೆ ಸ್ಥಳಾವಕಾಶ ನೀಡಲು ನಿರಾಕರಿಸುವ ಮುಖ್ಯೋಪಾಧ್ಯಯರ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿ ತಿಂಗಳ ಮೂರನೇ ಶನಿವಾರ ದಂದು ಎಲ್ಲಾ ತಾಲೂಕಾ ಮಟ್ಟದಲ್ಲಿ ಸಭೆ ಜರುಗಿಸಿ ನೋಡಲ್ಲ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಿಗೆ ಭೆಟಿ ನೀಡಿ ಪಾಲಕರ ಸಭೆಯ ಕುರಿತು ವರದಿ ಸಲ್ಲಿಸ ಬೇಕು. ಜಿಲ್ಲೆಯ ಎಲ್ಲಾ ಅಂಗನವಾಡಿ ಕೇಂದ್ರಗಳ ಸುತ್ತ ಮುತ್ತಲಿನ ಸ್ವಚ್ಛತೆಗೆ ಹೆಚ್ಚಿನ ಒತ್ತು ನೀಡಬೇಕು ಅಲ್ಲದೇ ಕೇಂದ್ರದ ಹತ್ತಿರ ಸಿ.ಸಿ. ರಸ್ತೆ ಹಾಗೂ ಚರಂಡಿಗಳ ನಿರ್ಮಾಣಕ್ಕೆ ಕ್ರಿಯಾ ಯೋಜನೆ ಸಲ್ಲಿಸಲು ಸೂಚಿಸಿದರು.

ಡೆಂಗ್ಯೂ ನಿಯಂತ್ರಣಕ್ಕೆ ಕ್ರಮ – ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಡೆಂಗ್ಯೂ ನಿಯಂಯ್ರಣಕ್ಕೆ ಅಗತ್ಯದ ಎಲ್ಲಾ ಕ್ರಮಗಳನ್ನು ಜರುಗಿಸ ಬೇಕು. ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆ, ತಾಲೂಕಾ ಪಂಚಾಯತ ಹಾಗೂ ಇತರ ಎಲ್ಲಾ ಇಲಾಖೆಗಳು ಸಮನ್ವಯ ದೊಂದಿಗೆ ಕಾರ್ಯ ನಿರ್ವಹಿಸ ಬೇಕು. ಡೆಂಗ್ಯೂ ಜ್ವರ ನಿಯಂತ್ರಣಕ್ಕೆ ಸಾರ್ವಜನಿಕರು ಕೈಗೊಳ್ಳ ಬೇಕಾದ ಮುಂಜಾಗೃತಾ ಕ್ರಮಗಳ ಕುರಿತು ಪರಿಣಾಮಕಾರಿ ಯಾಗಿ ಜಾಗೃತಿ ಮೂಡಿಸಲು ಆರೋಗ್ಯ ಇಲಾಖೆಯ ಜೊತೆಗೆ ತಾಲೂಕಾ ಪಂಚಾಯತಗಳು ಕ್ರಮ ವಹಿಸಬೇಕು. ಆಯುಷ್ಮಾನ ಮಂದಿರ ಹಾಗೂ ನಮ್ಮ ಕ್ಲಿನಿಕ್ ನಿರ್ಮಾಣಕ್ಕೆ ಬೇಕಾದಂತಹ ನಿವೇಶನವನ್ನು ಆದಷ್ಟು ಶೀಘ್ರವೇ ಗುರುತಿಸಲು ಸೂಚಿಸಿದರು.

ಶಾಲಾ ಕಟ್ಟಡಗಳ ದುರಸ್ತಿ ಪೂರ್ಣ ಗೊಳಿಸಲು ಸೂಚನೆ:

ಜಿಲ್ಲೆಯಲ್ಲಿ ಈಗಾಗಲೇ ಪ್ರಗತಿಯಲ್ಲಿರುವ ಶಾಲಾ ಕಟ್ಟಡಗಳ ನಿರ್ಮಾಣ ಹಾಗೂ ದುರಸ್ತಿ ಕಾರ್ಯಗಳು ಬರುವ ಅಕ್ಟೊಬರ್ ಮಾಹೆ ಯೊಳಗಾಗಿ ಪೂರ್ಣ ಗೊಳಿಸಲು ಸಂಬಂಧಿಸಿದ ಏಜೆನ್ಸಿಗಳಿಗೆ ರಾಹುಲ್ ಶಿಂಧೆ ಸೂಚನೆ ನೀಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ತಾ.ಪಂ. ಕಾರ್ಯ ನಿರ್ವಾಹಕ ಅಧಿಕಾರಿಗಳು ನಿಯಮಿತವಾಗಿ ಭೆಟಿ ನೀಡಿ ಶೀಘ್ರವೆ ಕಾಮಗಾರಿಗಳು ಪೂರ್ಣ ಗೊಳ್ಳುವಂತೆ ನಿಗಾ ವಹಿಸಬೇಕು. ನರೇಗಾ ಯೋಜನೆಯಡಿ ಶಾಲೆಗಳಲ್ಲಿ ಶೌಚಾಲಯ ನಿರ್ಮಾಣಕ್ಕೆ ಕ್ರಮ ಜರುಗಿಸ ಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳಾದ ಬಸವರಾಜ ಅಡವಿಮಠ, ಬಸವರಾಜ ಹೆಗ್ಗನಾಯಕ, ಮುಖ್ಯ ಯೋಜನಾಧಿಕಾರಿ ಗಂಗಾಧರ ದಿವಟರ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಶಿವನಗೌಡ ಪಾಟೀಲ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಶಿವಪ್ರಿಯಾ ಕಡೆಚೂರ, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಮೋಹನ ಹಂಚಾಟೆ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಬಸವರಾಜ ಕುರಿಹುಲಿ, ಅಲ್ಪ ಸಂಖ್ಯಾತರ ಕಲ್ಯಾಣಾಧಿಕಾರಿ ಅಬ್ದುಲ ರಶೀದ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಹೇಶ ಕೋಣಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ, ತಾಲೂಕಾ ಮಟ್ಟದ ಅಧಿಕಾರಿಗಳು ಹಾಜರಿದ್ದರು.

**ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಎಂ.ಎಂ. ಶರ್ಮಾ ಬೆಳಗಾವಿ.**

# ವೈದ್ಯಶ್ರೇಷ್ಠ ಪ್ರಶಸ್ತಿ ಪಡೆದ ಡಾ. ಕ್ರಾಂತಿ ಲೋಕುರ

**ಮುಧೋಳ :** ಆಸ್ಪತ್ರೆಗೆ ಬರುವ ಎಲ್ಲ ರೋಗಿಗಳನ್ನು ಪ್ರೀತಿಯಿಂದ ಮಾತಾಡಿಸಿ, ಅವರ ನೋವು ನಲಿವುಗಳಿಗೆ ಸ್ಪಂದಿಸಿ ರೋಗದಿಂದ ಗುಣ ಮುಕ್ತರಾಗುವಂತೆ ಎಲ್ಲಾ ರೀತಿಯ ಔಷಧೋಪಚಾರಗಳನ್ನು ಮಾಡಿ ಬಡಜನರ ಮನಸ್ಸನ್ನು ಗೆದ್ದಿರುವ ತಾಲೂಕಿನ ಮಳಲಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದ ಮುಖ್ಯ ವೈದ್ಯಾಧಿಕಾರಿ ಡಾ. ಕ್ರಾಂತಿ ಲೋಕುರ ಅವರಿಗೆ ಕರ್ನಾಟಕ ಸರ್ಕಾರವು 'ವೈದ್ಯ ಶ್ರೇಷ್ಠ' ಪ್ರಶಸ್ತಿಯನ್ನು ನೀಡಿ ಗೌರವಿಸಿದೆ. ಈ ಸಂಭ್ರಮಕ್ಕೆ ಆಶಾ ಸುಗಮಕಾರರಾದ ರುಕ್ಸಾನಾ ನಾಗಠಾಣ ಅವರು ವಿಶೇಷ ಗೌರವ ಸನ್ಮಾನ ಸಭೆಯನ್ನು ಜುಲೈ 9 ರಂದು



ಏರ್ಪಡಿಸಿ ಡಾ. ಕ್ರಾಂತಿ ಲೋಕುರ ಅವರನ್ನು ಗೌರವಿಸಿದರು. ಮಳಲಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಆಶಾ ಕಾರ್ಯಕರ್ತರು ಹಾಗೂ ಸಿಬ್ಬಂದಿ ವರ್ಗದವರು ಸಮಾರಂಭದಲ್ಲಿ ಪಾಲ್ಗೊಂಡು ಹೂ ಹಣ್ಣುಗಳನ್ನು ನೀಡಿ ಸಂಭ್ರಮಿಸಿದರು. ರುಕ್ಸಾನಾ ನಾಗಠಾಣ ಮಾತನಾಡಿ ಸಾರ್ವಜನಿಕ ಕ್ಷೇತ್ರದಲ್ಲಿ ನಿಸ್ವಾರ್ಥದಿಂದ, ನಿರಪೇಕ್ಷೆಯಿಂದ ಸೇವೆಯನ್ನು ಮಾಡಿದರೆ ಸರ್ಕಾರ ಮತ್ತು ಸಮಾಜ ಗೌರವಿಸುತ್ತದೆ ಎಂಬುದಕ್ಕೆ ಡಾ. ಕ್ರಾಂತಿ ಲೋಕುರ ಅವರೆ ನಿದರ್ಶನ ಎಂದರು. ಹಾಗಾಗಿ ಎಲ್ಲರೂ ಸಾರ್ವಜನಿಕ ಬದುಕಿನಲ್ಲಿ ಒಳ್ಳೆಯದನ್ನು ಮಾಡುವ ಗುಣವನ್ನು ಬೆಳೆಸಿಕೊಳ್ಳಬೇಕೆಂದರು.

ಹಿರಿಯ ನಿರೀಕ್ಷಣಾಧಿಕಾರಿ. ಆರ್ಯ್. ಎಸ್. ಕೋರಿಶೆಟ್ಟಿ, ಲೋಕ ನಾಯಕಿ ಸಾಂಸ್ಕೃತಿಕ ಸಂಸ್ಥೆಯ ಅಧ್ಯಕ್ಷೆ ಶ್ರೀಮತಿ ಶಾಮಲಾ ಲಕ್ಷ್ಮೇಶ್ವರ, ಲಕ್ಷ್ಮಣ್ ಕುಳ್ಳೊಳ್ಳಿ ಸೇರಿದಂತೆ ಎಲ್ಲಾ ಆಶಾ ಕಾರ್ಯಕರ್ತೆಯರು ಪಾಲ್ಗೊಂಡಿದ್ದರು.

# ಕಾರ್ಗಿಲ್ ರಾಷ್ಟ್ರ ಧ್ವಜಕ್ಕೆ ಸ್ವಾಗತ, ಕಾರ್ಗಿಲ್ ವಿಜಯೋತ್ಸವದಲ್ಲಿ ರಾಷ್ಟ್ರಾಭಿಮಾನ ಮೆರೆದ 400ಕ್ಕೂ ಅಧಿಕ ವಿದ್ಯಾರ್ಥಿಗಳು

**ಬೆಂಗಳೂರು :** ಕಾರ್ಗಿಲ್ ವಿಜಯೋತ್ಸವದ 25 ನೇ. ವರ್ಷಾಚರಣೆ ಎಪಿಎಸ್ ಶಿಕ್ಷಣ ಸಂಸ್ಥೆಯಲ್ಲಿ ಅದ್ದೂರಿಯಾಗಿ ನಡೆಯಿತು. ನಾಲ್ಕು ಸಹಸ್ರ ವಿದ್ಯಾರ್ಥಿಗಳು ಪಾಲ್ಗೊಂಡು ರಾಷ್ಟ್ರಾಭಿಮಾನ ಮೆರೆದರು.



ಕಾರ್ಗಿಲ್ ಯುದ್ಧ ಗೆದ್ದ ನಂತರ ಕಾರ್ಗಿಲ್ ನಲ್ಲಿ ಸ್ಥಾಪಿಸಲಾದ ಭಾರತೀಯ ರಾಷ್ಟ್ರಧ್ವಜವನ್ನು 25 ವರ್ಷದ ವಿಜಯೋತ್ಸವ ಸಂದರ್ಭದಲ್ಲಿ ಮತ್ತೊಮ್ಮೆ ಕಾರ್ಗಿಲ್ ನಿಂದ ತಂದು, ಎಪಿಎಸ್ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಗಳ ಸಮ್ಮುಖದಲ್ಲಿ ಮತ್ತೊಮ್ಮೆ ಧ್ವಜಾರೋಹಣ ನೆರವೇರಿಸಲಾಯಿತು. ಸಂಸ್ಥೆಯ ಅಧ್ಯಕ್ಷ ಡಾ. ವಿಷ್ಣು ಭರತ್ ಅಲಂಪಲ್ಲಿ ಮಾತನಾಡಿ, ಈ ರಾಷ್ಟ್ರಧ್ವಜವನ್ನು ರಾಜ್ಯದಾದ್ಯಂತ ರಥಯಾತ್ರೆಯ ಮೂಲಕ ಪ್ರತಿ ಜಿಲ್ಲೆಗೂ ಕೊಂಡಯ್ಯ ಲಾಗುತ್ತಿದೆ. ಈ ಶ್ರೇಷ್ಠ ಕಾರ್ಯಕ್ರಮಕ್ಕೆ ನಮ್ಮ ಸಂಸ್ಥೆಯಿಂದ ಚಾಲನೆ ಸಿಕ್ಕಿದ್ದು ನಮ್ಮ ಸೌಭಾಗ್ಯ. ಕಾರ್ಗಿಲ್ ಯುದ್ಧದ ಚಿತ್ರಣಗಳ ಸಂಚಾರಿ ವಸ್ತು ಪ್ರದರ್ಶನವನ್ನು ಸಹ ಏರ್ಪಡಿಸಲಾಗಿತ್ತು. ಇದೊಂದು ಅವಿಸ್ಮರಣೀಯ, ಹರ್ಷದಾಯಕ ಕ್ಷಣ ಎಂದು ಹೇಳಿದರು. ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಪ್ರೊ. ಎ.ಪ್ರಕಾಶ್. ಉಪಾಧ್ಯಕ್ಷ ವಿಜಯ ಭಾಸ್ಕರ್, ಜಂಟಿ ಕಾರ್ಯದರ್ಶಿ ಮಂಜುನಾಥ, ಎಲ್ಲಾ ಸಮೂಹ ಸಂಸ್ಥೆಗಳ ಪ್ರಾಂಶುಪಾಲರು, ಭೋಧಕ, ಬೋಧಕೇತರ ಸಿಬ್ಬಂದಿ, ಅಪಾರ ಸಂಖ್ಯೆಯ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಈ ರಥಯಾತ್ರೆಯು ಚಕ್ರವರ್ತಿ ಸೂಲಿಬೆಲೆ ಯುವ ಬ್ರಿಗೇಡ್ ಕಾರ್ಯಕರ್ತರ ಸಹ ಯೋಗದಲ್ಲಿ ಆಯೋಜಿಸಲಾಗಿತ್ತು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಪ್ರತಾಪ್ ವಾಯ್ ಕಿಳ್ಳಿ ಇಲಕಲ್ಲ.**

# ಯಲಬುರ್ಗಾ ಕುಕನೂರ ತಾಲೂಕಿನ ಗ್ರಾಮಗಳಲ್ಲಿ ಕೆರೆ ತುಂಬಿಸುವ ಯೋಜನೆ ಅನುಷ್ಠಾನಕ್ಕೆ ಯೋಜನೆ: ಬಸವರಾಜ ರಾಯರೆಡ್ಡಿ

**ಕೊಪ್ಪಳ :** ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸವರಾಜ ರಾಯರಡ್ಡಿ ಅವರು ಜುಲೈ 9ರಂದು ಸಿದ್ನೇಕೊಪ್ಪ, ಸೋಂಪೂರ, ಮಾಳೇಕೊಪ್ಪ, ನಿಂಗಾಪೂರ, ಬನ್ನಿಕೊಪ್ಪ, ಇಟಗಿ ಹಾಗೂ ಮಂಡಲಗೇರಿ ಗ್ರಾಮಗಳಲ್ಲಿ ಸಂಚರಿಸಿ ಮಹತ್ವದ ಕೆರೆ ತುಂಬಿಸುವ ಯೋಜನೆಯ ಬಗ್ಗೆ ಗ್ರಾಮಸ್ಥರೊಂದಿಗೆ ಸಭೆ ನಡೆಸಿ ಸುಧೀರ್ಘ ಚರ್ಚಿಸಿದರು.




ಕೃಷ್ಣ ಭಾಗ್ಯ ಜಲ ನಿಗಮ ನಿಯಮಿತ ವತಿಯಿಂದ ಯಲಬುರ್ಗಾ–ಕುಕನೂರ ತಾಲೂಕಿನಲ್ಲಿ ಕುಡಿಯುವ ನೀರು, ಅಂತರ್ಜಲ ಅಭಿವೃದ್ಧಿಗಾಗಿ ರೂ. 970 ಕೋಟಿ ಮೊತ್ತದ ಬೃಹತ್ 38 ಕೆರೆಗಳನ್ನು ತುಂಬಿಸಲು ಉದ್ದೇಶಿಸಲಾದ ಯೋಜನೆಗೆ ಜಮೀನು ಲಭ್ಯತೆಯ ಬಗ್ಗೆ ಸಿದ್ನೇಕೊಪ್ಪ, ಸೋಂಪೂರ, ಮಾಳೇಕೊಪ್ಪ, ನಿಂಗಾಪೂರ, ಬನ್ನಿಕೊಪ್ಪ, ಇಟಗಿ ಹಾಗೂ ಮಂಡಲಗೇರಿ ಗ್ರಾಮಗಳ ಹಿರಿಯರು ಮತ್ತು ರೈತ ಪ್ರತಿನಿಧಿಗಳೊಂದಿಗೆಏರ್ಪಡಿಸಿದ್ದಸಭೆಯಲ್ಲಿ ಮಾತನಾಡಿದ ರಾಯರೆಡ್ಡಿ ಅವರು, ಕೊಪ್ಪಳ ಜಿಲ್ಲೆಯ ಯಲಬುರ್ಗಾ ಮತ್ತು ಕುಕನೂರ ತಾಲ್ಲೂಕುಗಳ ಬಹುತೇಕ ಗ್ರಾಮಗಳಲ್ಲಿ ನೀರಿನ ಸಮಸ್ಯೆ ಇದ್ದು, ಈ ಸಮಸ್ಯೆಯ ಪರಿಹಾರಕ್ಕಾಗಿ ಮುಖ್ಯಮಂತ್ರಿಗಳಿಗೆ ಮನವರಿಕೆ ಮಾಡಿದ್ದರಿಂದಾಗಿ ಎರಡೂ ತಾಲೂಕಿನಲ್ಲಿ ಕುಡಿಯುವ ನೀರು ಹಾಗೂ ಅಂತರ್ಜಲ ಅಭಿವೃದ್ಧಿಗಾಗಿ 2024–25ನೇ ಸಾಲಿನ ಆಯವ್ಯಯದಲ್ಲಿ 970 ಕೋಟಿ ರೂ. ಅನುದಾನವನ್ನು ಘೋಷಿಸಲಾಗಿದೆ ಎಂದರು.

ಈ ಬೃಹತ್ 38 ಕೆರೆ ತುಂಬಿಸುವ ಯೋಜನೆಗೆ ಕನಿಷ್ಟ 50 ಎಕರೆಗಿಂತ ಹೆಚ್ಚಿಗೆ ಜಮೀನು ಪ್ರತಿಯೊಂದು ಗ್ರಾಮದಲ್ಲಿ ಬೇಕಾಗಿದ್ದು, ಜಮೀನುಗಳನ್ನು ಸರ್ಕಾರ ನಿಗದಿಪಡಿಸಿದ ದರದಲ್ಲಿ ಖರೀದಿಸಲಾಗುವುದು. ಈ ಯೋಜನೆ ಸಾಕಾರಗೊಂಡಲ್ಲಿ ಈ ಭಾಗದಲ್ಲಿ ಶಾಶ್ವತವಾಗಿ ಕುಡಿಯುವ ನೀರಿನ ಸಮಸ್ಯೆ ತಪ್ಪಲಿದೆ. ಹೀಗಾಗಿ ಗ್ರಾಮಸ್ಥರು ಸಹಕರಿಸಿ ಸಾರ್ವಜನಿಕ ಅನುಕೂಲಕ್ಕಾಗಿ ಜಮೀನು ನೀಡಲು ಮುಂದೆ ಬರಬೇಕು ಎಂದು ಮನವಿ ಮಾಡಿದರು.

ಕೃಷ್ಣ ಭಾಗ್ಯ ಜಲ ನಿಗಮ ನಿಯಮಿತದ ಮುಖ್ಯ ಎಂಜಿನಿಯರ್ ಮಂಜುನಾಥ ಅವರು ಮಾತನಾಡಿ, ಕೆರೆ ತುಂಬಿಸುವ ಈ ಯೋಜನೆಯು ರಾಜ್ಯದಲ್ಲಿಯೇ ಹೊಸದು. ರಾಯರೆಡ್ಡಿ ಅವರು ತಮ್ಮ ಕ್ಷೇತ್ರದ ಜನರ ಅನುಕೂಲಕ್ಕಾಗಿ ಯೋಜನೆಯ ಅನುಷ್ಠಾನಕ್ಕೆ ಶ್ರಮಿಸುತ್ತಿದ್ದು, ಜನರು ಸಹಕರಿಸಬೇಕು. ಇದೊಂದು ಐತಿಹಾಸಿಕ ಯೋಜನೆಯಾಗಿದ್ದು, ಸಾರ್ವಜನಿಕರು ಕೆರೆಗಳ ನಿರ್ಮಾಣಕ್ಕೆ ಜಮೀನು ನೀಡಲು ಮುಂದೆ ಬರಬೇಕು ಎಂದು ತಿಳಿಸಿದರು.

ಸಮಾರಂಭದಲ್ಲಿ ಸಹಾಯಕ ಆಯುಕ್ತರಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ತಹಶೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು, ಕೃಷ್ಣ ಭಾಗ್ಯ ಜಲ ನಿಗಮ ನಿಯಮಿತದ ಇನ್ನಿತರ ಅಭಿಯಂತರರು, ಆಯಾ ಗ್ರಾಮದ ಹಿರಿಯರು, ರೈತರು ಮತ್ತು ರೈತ ಮುಖಂಡರು ಇದ್ದರು.

ರೈತರಲ್ಲಿ ಮನವಿ: ಜುಲೈ 11 ರಂದು ಬೆಳಿಗ್ಗೆ 10 ಗಂಟೆಗೆ ಮಂಗಳೂರು, 11 ಗಂಟೆಗೆ ಶಿರೂರ, ಮಧ್ಯಾಹ್ನ 12 ಗಂಟೆಗೆ ಬಳಗೇರಿ, 1 ಗಂಟೆಗೆ ತಿಪ್ಪರಸನಾಳ, 03 ಗಂಟೆಗೆ ಕಲ್ಲೂರ, 4 ಗಂಟೆಗೆ ಸಂಗನಾಳ, ಸಂಜೆ 05 ಗಂಟೆಗೆ ರಾಜೂರು ಗ್ರಾಮಗಳಲ್ಲಿ, ಜುಲೈ 12 ರಂದು ಬೆಳಿಗ್ಗೆ 10 ಗಂಟೆಗೆ ಬಂಡಿ, 11 ಗಂಟೆಗೆ ತುಮ್ಮರಗುದ್ದಿ, ಮಧ್ಯಾಹ್ನ 12 ಗಂಟೆಗೆ ವಜ್ರಬಂಡಿ, 1 ಗಂಟೆಗೆ ಹಿರೇಅರಳಿಹಳ್ಳಿ, 03 ಗಂಟೆಗೆ ಮಾಟಲದಿನ್ನಿ, 4 ಗಂಟೆಗೆ ಯಡ್ಡೋಣಿ, ಸಂಜೆ 05 ಗಂಟೆಗೆ ಬೋದೂರ ಗ್ರಾಮಗಳಿಗೆ ಶಾಸಕರು ಅಧಿಕಾರಿಗಳೊಂದಿಗೆ ಭೇಟಿ ನೀಡಿ ಸಭೆ ನಡೆಸಲಿದ್ದಾರೆ. ಸಭೆಯಲ್ಲಿ ನಿಗದಿತ ದಿನಾಂಕಗಳಂದು ಎಲ್ಲಾ ರೈತರು ಸಾರ್ವಜನಿಕರು ಹಾಗೂ ಊರಿನ ಮುಖಂಡರು ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಶಾಸಕರ ಕಚೇರಿಯ ಪ್ರಕಟಣೆ ತಿಳಿಸಿದೆ.

# ದಲಿತ ಸಾಹಿತ್ಯ ಪರಿಷತ್ತಿನ ಪೂರ್ವಭಾವಿ ಸಭೆ



**ಮಸ್ಕಿ :** ಪಟ್ಟಣದ ಸರ್ಕ್ಯೂಟ್ ಹೌಸ್ ಸಭಾಂಗಣದಲ್ಲಿ ದಲಿತ ಸಾಹಿತ್ಯ ಪರಿಷತ್ತ್ ಮಸ್ಕಿ ತಾಲೂಕ ಘಟಕದ ವತಿಯಿಂದ

ದಲಿತ ಸಾಹಿತ್ಯ ಪರಿಷತ್ತ್ ತಾಲೂಕ ಘಟಕ ಮತ್ತು ದಲಿತ ಸಾಹಿತ್ಯ ಪರಿಷತ್ತ್ ತಾಲೂಕ ಯುವ ಘಟಕಗಳ ಅಧ್ಯಕ್ಷರುಗಳ ಮತ್ತು ಸಮಿತಿಯ ಪದಾಧಿಕಾರಿಗಳ ಪದ ಗ್ರಹಣದ ಪೂರ್ವ ಭಾವಿ ಸಭೆಯನ್ನು ದಿನಾಂಕ 17/07/2024 ರಂದು ಬುಧವಾರ ಬೆಳಿಗ್ಗೆ 10 ಗಂಟೆಗೆ ಸಭೆಯನ್ನು ಏರ್ಪಡಿಸಲಾಯಿತು.

ಈ ಸಭೆಯನ್ನು ದಲಿತ ಸಾಹಿತ್ಯ ಪರಿಷತ್ ತಾಲೂಕ ಅಧ್ಯಕ್ಷರಾದ ನಾಗೇಶ್ ಜಂಗಮರಹಳ್ಳಿ ನೇತೃತ್ವದಲ್ಲಿ ಜರುಗಿತು. ಸಭೆಯಲ್ಲಿ ದಿನಾಂಕ 28-07-2024 ಭಾನುವಾರ ದಂದು ದಲಿತ ಸಾಹಿತ್ಯ ಪರಿಷತ್ ತಾಲೂಕ ಸಮಿತಿ ಮಸ್ಕಿ ವತಿಯಿಂದ ಪದಾಧಿಕಾರಿಗಳ ಪದ ಗ್ರಹಣ ಕಾರ್ಯಕ್ರಮವನ್ನು ನಡೆಸಲು ತೀರ್ಮಾನಿಸಲಾಯಿತು.

ಅಂದಿನ ದಿನ ಪ್ರಗತಿಪರ ಚಿಂತಕರು, ರೈತ ಮುಖಂಡರು, ಸಾಹಿತ್ಯಾ ಸಕ್ತಿಯ ಯುವಕ ಯುವತಿಯರು ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ವಿನಂತಿ ಎಂದು ತಾಲೂಕ ಅಧ್ಯಕ್ಷರು ಪತ್ರಿಕಾ ಪ್ರಕಟಣೆಗೆ ತಿಳಿಸಿದರು. ಇದೇ ಸಂದರ್ಭದಲ್ಲಿ ಹನುಮಂತ ನಾಯಕ ರಂಗಾಪೂರು, ರಾಮನಗೌಡ ಮಸ್ಕಿ, ಹುಲುಗಪ್ಪ ಗೋನಾಳ, ಗ್ಯಾನಪ್ಪ ಮೆದಿಕಿನಾಳ ವರದಿಗಾರರು, ದೇವರಾಜ ಜಿ.ಘಂಟಿ, ವೀರಪ್ಪ.ಡಿ, ಹನುಮಂತಪ್ಪ ಚಿಕ್ಕಕಡಬೂರು ಹಾಗೂ ಇತರರು ಉಪಸ್ಥಿತಿ ಇದ್ದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಪ್ರತಾಪ್ ವಾಯ್ ಕಿಳ್ಳಿ ಇಲಕಲ್ಲ.**

# ತಾಳಿಕೋಟೆ: ಪ್ರಜ್ಞಾಹೀನ ಪುತ್ರ ಪ್ರಜ್ಞಾವಂತನಾದ!

**ತಾಳಿಕೋಟೆ :** ಚಿಕ್ಕ ವಯಸ್ಸಿನಲ್ಲಿಯೇ ಪ್ರಜ್ಞಾಹೀನನಂತೆ ಕಂಡು ಬಂದ ಬುದ್ದಿಮಾಂದ್ಯತನದಿಂದ ವರ್ತಿಸುತ್ತಾ ನಡೆದ ಬಾಲಕನೋರ್ವನ ಮಾತಾಪಿತರು ಚಿಂತೆಗೊಳಗಾಗಿದ್ದರಲ್ಲದೇ ಆ ಪುತ್ರನನ್ನು ತೆಗೆದುಕೊಂಡು 3 ವರ್ಷದವನಿರುವಾಗಲೇ ಕೆಲವು ಆಸ್ಪತ್ರೆಗಳಿಗೆ ತಿರುಗಿ ತಿರುಗಿ ಬೇಸತ್ತ ಮಾತಾಪಿತರು ಕೊನೆಗೆ ತಾಳಿಕೋಟೆಯ ಶ್ರೀ ಖಾಸ್ಗತೇಶ್ವರ ಮಠದ ಹಿಂದಿನ ಪೀಠಾಧಿಪತಿಗಳಾದ ಲಿಂಗೈಕ್ಯ ಶ್ರೀ ವಿರಕ್ತ ಮಹಾಸ್ವಾಮಿಗಳ ಮೊರೆ ಹೋಗಿದ್ದ ಕುಟುಂಭದವರುಶ್ರೀವಿರಕ್ತಮಹಾಸ್ವಾಮಿಗಳು 2014 ಅಗಸ್ಟ 20 ರಂದು ಲಿಂಗೈಕ್ಯರಾದ ದಿನದಿಂದಲೇ ಈ ಬುದ್ದಿಮಾಂದ್ಯ ಬಾಲಕನೋರ್ವ ಈಗ ಬುದ್ದಿತನದಿಂದ ವರ್ತಿಸುತ್ತಾಸಾಗಿರುವಆಬಾಲಕಸಾಗಿದ್ದನ್ನು ನೋಡಿ ಮಾತಾಪಿತರು ಹಾಗೂ ಆ ಇಡೀ ಕುಟುಂಭದ ಜನತೆ ಹರ್ಷಿತರಾಗಿದ್ದೇನು ಕಡಿಮೇನಿಲ್ಲಾ.

ತಾಳಿಕೋಟೆ ಪಟ್ಟಣದ ಸುಸಿಕ್ಷೀತ ಮನೆತನದ ಹಣಮಂತ್ರಾಯ ಜಯಶ್ರೀ ಬೊಮ್ಮನಹಳ್ಳಿ ಈ ದಂಪತಿಯವರ ಪುತ್ರನೇ ಬುದ್ದಿಮಾಂದ್ಯನಾಗಿದ್ದಪುತ್ರಅರುಣಕುಮಾರ ಎಂಬವ ಇತ್ತೀಚಗೆ ಬೆಳಕಿಗೆ ಬಂದಿದೆ. ಪುತ್ರನ ವಿವರಣೆಯನ್ನು ಈ ದಂಪತಿಗಳಿಗೆ ಪತ್ರಿಕೆ ಪಡೆಯಲುಹೋದಾಗಅವರಮಾತಾಪಿತರು ಹೇಳಿದಿಷ್ಟು. ಸುಸಿಕ್ಷೀತ ಮನೆತನದವರಾದ ನಾವು ಪುತ್ರ ಜನ್ಮತಾಳಿದನೆಂಬ ಹರ್ಷದಲ್ಲಿ ಇಡೀನಮ್ಮಕುಟುಂಭವೇಹರ್ಷವ್ಯಕ್ತಪಡಿಸಿತ್ತು ಆದರೆ ಬರ ಬರುತ್ತಾ ಪುತ್ರ ಅರುಣಕುಮಾರ ಇತ ಬುದ್ದಿಮಾಂದ್ಯತನದಿಂದ ಹುಚ್ಚರಂತೆ ವರ್ತಿಸುತ್ತಾ ನಡೆದ ಇದ–ರಿಂದ ನಮ್ಮ ಇಡೀ ಕುಟುಂಭವೇ ಚಿಂತೆಗೆ ಒಳಪಟ್ಟಿದ್ದೇನು ಕಡಿಮೇನಿಲ್ಲಾವೆಂದು ಈ ಪುತ್ರ ಅರುಣಕುಮಾರನ ಮಾತಾಪಿತರಾದ ಹಣಮಂತ್ರಾಯ ಹಾಗೂ ಜಯಶ್ರೀ ಅವರು ಪತ್ರಿಕೆಗೆ ತಿಳಿಸಿದ್ದಾರೆ.

ಪುತ್ರ ದೊಡ್ಡವನಾಗುತ್ತಿದ್ದಂತೆ ತನ್ನ ಬುದ್ದಿಮಾಂದ್ಯತನವನ್ನೇ ಹೆಚ್ಚುತ್ತಾ ಸಾಗಿದ ಈ ವಿಷಯದಲ್ಲಿ ಯಾವುದೇ ಕಡಿಮೆ ಕಾಣಲಿಲ್ಲಾ ಅಲ್ಲಲ್ಲಿ ಕೆಲವು ಆಸ್ಪತ್ರೆಗಳಿಗೆ ಬೆಟ್ಟಿ ನೀಡಿ ವೈಧ್ಯರನ್ನು ಸಂಪರ್ಕಿಸಿ ಅವರು ತಿಳಿಸಿದಂತೆ ಔಷಧೋಪಚಾರವನ್ನೂ ಸಹ ಮಾಡಿದವಲ್ಲದೇಕೆಲವರುಹೇಳಿದಂತೆಆತನಿಗೆ ಮಾಲಿಸ್‌ವನ್ನೂ ಕೂಡಾ ಮಾಡುವಂತಹ ಕಾರ್ಯ ನಡೆಸಿದೆವು.

ಈ ಹಿಂದಿನಿಂದ ಬಂದಂತೆ ನಮ್ಮ ಮನೆತನದ ಕುಟುಂಬದವರು ಶ್ರೀ ಖಾಸ್ಗತ ಮಠಕ್ಕೆ ಭಕ್ತಿ ಸಮರ್ಪಿಸುತ್ತಾ ಸಾಗಿದಲ್ಲದೇ ಶ್ರೀಮಠಕ್ಕೆ ಬರ ಹೋಗುವಪದ್ದತಿಯಂತೂಎಂದಿನಂತೆನಡೆದೆ ಇತ್ತು.ಅಂದುಶ್ರೀಮಠದಪೀಠಾಧಿಪತಿಗಳಾದ ಶ್ರೀ ವಿರಕ್ತ ಮಹಾಸ್ವಾಮಿಗಳ ಪಾದಕ್ಕೆ ಪುತ್ರನನ್ನು ಹಾಕಿ ಈ ನಡೆದಂತಹ ಘಟನೆಯ ಕುರಿತು ಹಾಗೂ ಈ ಬುದ್ದಿಮಾಂದ್ಯ ಪುತ್ರ ಮಾಡುತ್ತಿದ್ದ ಉದ್ದಟತನದ ಕಾರ್ಯವೂ ಕೂಡಾ ಶ್ರೀಗಳಿಗೆ ತಿಳಿಸಿದೆವು. ಶ್ರೀಗಳು ನಸುನಕ್ಕು ತಮ್ಮಲ್ಲಿಯ ವಿಭೂತಿಯನ್ನು ನಮಗೆ ನೀಡಿದರಲ್ಲದೇ ಆ ವಿಭೂತಿಯನ್ನು ದಿನಾಲು ಆ ಪುತ್ರನಿಗೆ ಸ್ನಾನ ಮಾಡಿಸಿ ಹಚ್ಚುವ ಕಾರ್ಯ ಮಾಡಿ ಸರಿ ಹೋಗುತ್ತದೆ ಎಂದಾಗ ಪುತ್ರನ ಪ್ರಜ್ಞಾವಂತಿಕೆ ಬಂದರೆ ಅವನ ವಯೋಮಿತಿ ತಕ್ಕಂತೆ ತುಲಾಭಾರವನ್ನು ನೆರವೇರಿಸಿಕೊಂಡು ಆ ತುಲಾಭಾರದಲ್ಲಿ ಎಷ್ಟು ಹಣ ಕೂಡ್ರುತ್ತದೆಯೋ ಅಷ್ಟು ಹಣ ಶ್ರೀಮಠಕ್ಕೆ ಅರ್ಪಿಸುತ್ತೇವೆಂದು ಶ್ರೀ ವಿರಕ್ತ ಮಹಾಸ್ವಾಮಿಗಳ ಎದುರಿಗೆ ಮಾಡಿದಂತಹ ಮಾಗ್ದಾನ ಶ್ರೀಗಳ ಆಶಿರ್ವಾದದ ಫಲದಿಂದ ಈಗ ಪುತ್ರ ಅರುಣಕುಮಾರ ಈಗ 21 ವರ್ಷಕ್ಕೆ ಪಾದಾರ್ಪಣೆಮಾಡಿದ್ದುಸುಮಾರು47ಕಿಲೋ ತೂಕದವ ಈಗ ಆಗಿದ್ದು ಅವನ ತೂಕದಷ್ಟೇ ಹಣವನ್ನು ಈಗೀನ ಶ್ರೀ ಖಾಸ್ಗತೇಶ್ವರ ಮಠದ ಶ್ರೀಗಳಿಗೆ ಸಿದ್ದರಾಗಿದ್ದೇವೆ.

ಯಾಕೆಂದರೆ ಪುತ್ರ ಅರುಣಕುಮಾರ ಈಗ ಪ್ರಜ್ಞಾವಂತ ಸ್ಥಿತಿಯಲ್ಲಿ ಅನ್ಯರಂತೆ ಎಲ್ಲರಂತೆ ಕೆಲಸ ಕಾರ್ಯಗಳನ್ನು ಮಾಡುತ್ತಾ ಸಾಗಿದ್ದಾನೆ ಶ್ರೀಗಳು ನೀಡಿದ ವಿಭೂತಿ ಹಚ್ಚಿದ ಮಹಿಮೆಯಿಂದಲೇ ಆತ 14 ವರ್ಷದವ ಆಗುವಷ್ಟರಲ್ಲಿಯೇ ಸಂಪೂರ್ಣ ಪ್ರಜ್ಞಾವಂತನಾಗಿದ್ದಾನೆ ಈಗಂತೂ ಮಾತಾಪಿತರನ್ನು ಪರಿಚಯಿಸುತ್ತಾನೆ ಅಕ್ಕ, ತಮ್ಮ, ಅಣ್ಣ, ತಮ್ಮ ಎಂಬುದನ್ನು ಅರೀತು–ಕೊಂಡುತನ್ನಗೆಳೆಯರೊಂದಿಗೆಆಟವಾಡುತ್ತಾ ಅರಳುಹಿರಿದಂತೆಪಟಪಟನೆಮಾತನಾಡುವ ಸ್ಥಿತಿಯಲ್ಲಿ ಮುಂದುವರೆದಿದ್ದಾನೆ.

# ಡಾ.ಹಳಕಟ್ಟಿ ಅವರು ವಚನಗಳನ್ನು ಉಳಿಸಿ ಬೆಳೆಸಿದವರು



**ತಾಳಿಕೋಟೆ :** ವಚನಫಿತಾಮಹವೆಂದೇ ಹೆಸರಾಗಿದ್ದ ಡಾ.ಫ.ಗು.ಹಳಕಟ್ಟಿ ಅವರು ಸಂಶೋದಕರು ಸಾಹಿತ್ಯ ಪ್ರಚಾರಕರು ಮತ್ತು ಸಂಪಾದಕರಾಗಿದ್ದರಲ್ಲದೇ ಯಾವ ರೀತಿ ಪಕೀರನಿಗೆ ಆಸೆ ಇರುವದಿಲ್ಲವೋ ಅದೇ ರೀತಿ ಡಾ.ಪಕೀರಪ್ಪನವರು ವಚನಗಳನ್ನು ಉಳಿಸಿ ಬೆಳೆಸಿ 83ವರ್ಷಗಳ ಕಾಲ ಜೀವನ ನಡೆಸಿ ಎಲ್ಲರಿಗೂ ಆದರ್ಶಪ್ರೀಯರಾಗಿದ್ದರೆಂದು ಎಸ್.ಕೆ.ಕಲಾ ಹಾಗೂ ವಾಣಿಜ್ಯ ವಿಜ್ಞಾನ ಮಹಾ ವಿದ್ಯಾಲಯದ ನಿವೃತ್ತ ಪ್ರಾಚಾರ್ಯರಾದ ಆರ್.ವ್ಹಿ.ಜಾಲವಾದಿ ಅವರು ನುಡಿದರು.

ಗುರುವಾರರಂದು ತಾಳಿಕೋಟೆ ತಾಲೂಕಾ ಕನ್ನಡ ಸಾಹಿತ್ಯ ಪರಿಷತ್‌ವತಿಯಿಂದ ಪರಿಷತ್ತಿನ ಸಭಾ ಭವನದಲ್ಲಿ ಏರ್ಪಡಿಸಲಾದ ವಚನ ಫಿತಾಮಹ ಡಾ.ಫ.ಗು.ಹಳಕಟ್ಟಿ ಅವರ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಸನ್ಮಾನ ಸ್ವಿಕರಿಸಿ ಮಾತನಾಡುತ್ತಿದ್ದ ಅವರು ಡಾ.ಫ.ಗು.ಹಳಕಟ್ಟಿಯಂತವರು ಮತ್ತೇ ಮತ್ತೇ ಹುಟ್ಟಿ ಬರಬೇಕಾಗಿದೆ ಬಸವಣ್ಣನವರ ವಚನಗಳಿಗೆ ಇನ್ನಷ್ಟು ಹೆಚ್ಚಿಗೆ ಬೆಳಕು ನೀಡುತ್ತಾ ಸಾಗಿದ್ದರೆಂದು ಹೇಳಿದ ಅವರು ಕಲ್ಬುರ್ಗಿ ಸಂಶೋದಕರನ್ನು ಕೂಡಾ ನೆನಪಿಸಿದ ಪ್ರೋ.ಜಾಲವಾದಿ ಅವರು ಶ್ರೀಮಂತ ಸಾಹಿತ್ಯ ಬೆಳೆಯಲು ಇಂತಹ ಚಿಂತಕರ ಅಗತ್ಯವಾಗಿದೆ ಎಂದರು.

ಇನ್ನೋರ್ವ ಕನ್ನಡ ಸಾಹಿತ್ಯ ಪರಿಷತ್ತಿನ ತಾಳಿಕೋಟೆ ತಾಲೂಕಾ ಅಧ್ಯಕ್ಷರಾದ ಆರ್.ಎಲ್.ಕೊಪ್ಪದ ಅವರು ಮಾತನಾಡಿ ಪ್ರತಿಭಾವಂತ ಮಕ್ಕಳಿಗೂ ಹಾಗೂ ಪ್ರತಿಯೊಂದು ಶಾಲೆಗೂ 250 ವಚನಗಳನ್ನೋಳಗೊಂಡಂತಹ ಪುಸ್ತಕಗಳನ್ನು ಸಾಹಿತ್ಯ ಪರಿಷತ್ತಿನ ವತಿಯಿಂದ ನೀಡುವಂತಹ ವ್ಯವಸ್ಥೆ ಕುರಿತು ರಾಜ್ಯಾಧ್ಯಕ್ಷರು ಹಾಗೂ ಜಿಲ್ಲಾ ಅಧ್ಯಕ್ಷರೊಂದಿಗೆ ಚರ್ಚೆ ನಡೆಸಲಾಗಿದೆ ಈ ಕಾರ್ಯ ಸೀಘ್ರವೇ ಮಾಡಲು ಮುಂದಾಗಲಿದ್ದೇವೆಂದರು. ಆಯಾ ಪುಸ್ತಕಗಳಲ್ಲಿ ಫ.ಗು.ಹಳಕಟ್ಟಿ ಅವರ ಜೀವನ ಕುರಿತು ಪರಿಚಯಿಸುವ ಕಾರ್ಯವೂ ಕೈಕೊಳ್ಳಲಾಗುತ್ತದೆ ಎಂದು ಹೇಳಿದ ಅವರು ಡಾ.ಫ.ಗು.ಹಳಕಟ್ಟಿ ಅವರು ತಮ್ಮ ವಕೀಲ ವೃತ್ತಿಯೊಂದಿಗೆ ಎಷ್ಟೇ ಕಷ್ಟ ಕಾರ್ಪಣ್ಯಗಳೂ ಬಂದರೂ ಸಹ ವಚನಗಳನ್ನು ಪ್ರಕಟಿಸುವ ಕಾರ್ಯ–ಕ್ಕೆ ಮುಂದಾಗಿ ವಚನಫಿತಾಮಹವೆಂಬ ಬೀರದನ್ನು ಪಡೆಯಲು ಕಾರಣವಾಗಿದೆ ಎಂದರು.

ಇನ್ನೋರ್ವ ಉಪನ್ಯಾಸಕರುಗಳಾದ ಆರ್.ಬಿ.ದಾನಿ ಹಾಗೂ ಅನೀಲ ಇರಾಜ ಅವರು ಮಾತನಾಡಿ ವಚನಗಳನ್ನು ಮುದ್ರಿಸಿ ಅವುಗಳನ್ನು ಬೆಳಕಿಗೆ ತಂದಂತಹದ್ದು ಡಾ.ಫ.ಗು.ಹಳಕಟ್ಟಿ ಅವರಿಗೆ ಸಲ್ಲುತ್ತದೆ ಅವರು ಸೈಕಲ್ ಮೇಲೆ ತಿರುಗಾಡಿ ವಚನಗಳನ್ನು ಸಂಗ್ರಹಿಸಿ ಸಾಲವನ್ನು ಮಾಡಿ ಪ್ರಕಟಿಸುವ ಕಾರ್ಯಕ್ಕೆ ಮುಂದಾದರಲ್ಲದೇ ಬೆಳಗಾವಿ ಹಾಗೂ ವಿಜಯಪುರದಲ್ಲಿ ವಕೀಲ ವೃತ್ತಿ ಮುಂದುವರೆದಿದ್ದರೂ ಕನ್ನಡ ಭಾಷೆಯ ಬಗ್ಗೆ ಬಹಳೇ ಆಸಕ್ತಿ ವಹಿಸಿ ವಚನಗಳನ್ನು ಪ್ರಕಟಿಸುವದರಲ್ಲಿ ಬೆಳಕು ತಂದ ಕೀರ್ತಿ ಡಾ.ಫ.ಗು.ಹಳಕಟ್ಟಿ ಅವರಿಗೆ ಸಲ್ಲುತ್ತದೆ ಎಂದರು.

ಇದೇ ಸಮಯದಲ್ಲಿ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಇತ್ತೀಚಗೆ ನಿವೃತ್ತಿ ಹೊಂದಿದ ಪ್ರೋ.ಆರ್.ವ್ಹಿ.ಜಾಲವಾದಿ ಅವರಿಗೆ ನಿವೃತ್ತ ಮುಖ್ಯೋಪಾಧ್ಯಾಯರಾದ ಪಿ.ಬಿ.ಭಂಟನೂರ, ಹಾಗೂ ಎಂ.ಎ.ಬಾಗೇವಾಡಿ, ಸಿವ್ಹಿ.ಮೆಣಸಿನಕಾಯಿ ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದ ಮೊದಲಿಗೆ ಡಾ.ಫ.ಗು.ಹಳಕಟ್ಟಿ ಅವರ ಭಾವಚಿತ್ರಕ್ಕೆ ಎಲ್ಲ ಉಪಸ್ಥಿತ ಕಸಾಪ ಸದಸ್ಯರು ಹಾಗೂ ಪದಾಧಿಕಾರಿಗಳು, ಅತಿಥಿ ಮಹೋದಯರು ಪುಷ್ಪಾರ್ಚನೆ ಮಾಡುವದರೊಂದಿಗೆ ಗೌರವಿಸಿದರು.

ಈ ಕಾರ್ಯಕ್ರಮದಲ್ಲಿ ಡಾ.ಎ.ಎ.ನಾಲಬಂದ, ಜಿ.ಟಿ.ಘೋರ್ಪಡೆ, ಡಾ.ನಜೀರ ಕೊಳ್ಯಾಳ, ಸಂಗಮೇಶ ಪಾಲ್ಕಿ, ಅಶೋಕ ಚಿನಗುಡಿ, ಸಿದ್ದಾರ್ಥ, ವಿಶ್ವನಾಥ ಗಣಾಚಾರಿ, ಶಿವಾನಂದ ಹೂಗಾರ, ಬಸವರಾಜ ಮದರಕಲ್ಲ, ಎಸ್.ವ್ಹಿ.ಜಾಮಗೊಂಡಿ, ಮಾನಸಿಂಗ್ ಕೊಕಟನೂರ, ಮುತ್ತು ಕಶೆಟ್ಟಿ, ಸಿದ್ದು ಶಿರಶಿ, ಮೊದಲಾದವರು ಉಪಸ್ಥಿತರಿದ್ದರು.

ವಿಶ್ವನಾಥ ಗಣಾಚಾರಿ ನಿರೂಪಿಸಿದರು. ಮಹಾಂತೇಶ ಮುರಾಳ ವಂದಿಸಿದರು.

# ಮಕ್ಕಳ ಸೇವೆ ಮಾಡುವುದೇ ಒಂದು ಸೌಭಾಗ್ಯ: ಸಂಗಮೇಶ ಬಬಲೇಶ್ವರ



**ವಿಜಯಪುರ :** ಮಕ್ಕಳು ದೇವರ ಸಮಾನರು. ಅವರ ಸೇವೆ ಮಾಡುವ ಸೌಭಾಗ್ಯ ದೊರೆತಿರುವ ಇಲ್ಲಿಯ ಸಿಬ್ಬಂದಿ ನಿಜಕ್ಕೂ ಭಾಗ್ಯವಂತರು ಎಂದು ಕರ್ನಾಟಕ ಬಾಲ ವಿಕಾಸ ಅಕಾಡೆಮಿ ನೂತನ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಹೇಳಿದರು.

ಗುರುವಾರ ನಗರದ ಜಿಲ್ಲಾ ಪಂಚಾಯತಿ ಬಳಿ ಇರುವ ಬಾಲಕರ ಬಾಲ ಮಂದಿರಕ್ಕೆ ಭೇಟಿ ನೀಡಿ ಅವರು ಮಾತನಾಡಿದರು.

ಮಕ್ಕಳ ಸೇವಾ ಭಾಗ್ಯ ಒಂದು ಸೌಭಾಗ್ಯವೆಂದು ತಿಳಿಯಿರಿ. ಮಕ್ಕಳ ಸೇವೆಯೇ ಭಗವಂತನ ಸೇವೆ. ಬಾಲಮಂದಿರದಲ್ಲಿರುವ ಮಕ್ಕಳಿಗೆ ನೀವೇ ತಂದೆ ತಾಯಿಯ ಪ್ರೀತಿಯನ್ನು ನೀಡಿ, ಪೊ?ಷಿಸಿ, ಬೆಳೆಸಿ ಅವರನ್ನು ಸಮಾಜದ ಮುಖ್ಯವಾಹಿನಿಗೆ ಅಣಿಗೊಳಿಸಬೇಕು ಎಂದು ತಿಳಿಸಿದರು.

ಬಾಲ ಮಂದಿರ ಪರಿಶೀಲಿಸಿದ ಅವರು, ಅಲ್ಲಿರುವ ಹಲವಾರು ನ್ಯೂನ್ಯತೆಗಳನ್ನು ಪಟ್ಟಿ ಮಾಡಿ ಒಂದು ವಾರದಲ್ಲಿ ಅವುಗಳನ್ನು ಸರಿಪಡಿಸಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸ್ವಚ್ಛತೆ, ಶುಚಿತ್ವ ಮತ್ತು ಗುಣಮಟ್ಟದ ಆಹಾರ ಒದಗಿಸದಿದ್ದರೆ ಶಿಸ್ತು ಕ್ರಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಇದೇ ಸಂದರ್ಭದಲ್ಲಿ ಬಾಲ ಮಂದಿರದಲ್ಲಿ ಸಸಿ ನೆಟ್ಟ ಅವರು, ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ. ಪಾಟೀಲ ಅವರು ಕೋಟಿ ವೃಕ್ಷ ಅಭಿಯಾನದ ಮೂಲಕ ಜಿಲ್ಲೆಯಾದ್ಯಂತ ಲಕ್ಷಾಂತರ ಸಸಿಗಳನ್ನು ನೆಟ್ಟು ನಮ್ಮೆಲ್ಲರಿಗೂ ಪ್ರೇರಕ ಶಕ್ತಿಯಾಗಿದ್ದಾರೆ. ಬಾಲಕರ ಬಾಲಮಂದಿರದ ಆವರಣದಲ್ಲಿ ಸಾಕಷ್ಟು ಜಾಗ ಇರುವುದರಿಂದ ಕೋಟಿ ವೃಕ್ಷ ಅಭಿಯಾನ ಹಾಗೂ ಅರಣ್ಯ ಇಲಾಖೆಯ ಸಹಯೋಗದಿಂದ ಆವರಣದ ತುಂಬಾ ಸಸಿಗಳನ್ನು ನೆಟ್ಟು ಪೋಷಿಸಿ, ಪರಿಸರ ಉಳಿಸುವ ಪುಣ್ಯದ ಕಾರ್ಯದಲ್ಲಿ ಪಾಲ್ಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಮನವಿ ಮಾಡಿದರು. ಬಾಲಮಂದಿರದ ಮಕ್ಕಳೊಂದಿಗೆ ಸಮಯ ಕಳೆದ ಅವರು, ಗ್ರಂಥಾಲಯದಲ್ಲಿರುವ ಪುಸ್ತಕಗಳನ್ನು ಓದಲು ಹಾಗೂ ಮಹಾಪುರುಷರ ಆದರ್ಶಗಳನ್ನು ಅಳವಡಿಸಿಕೊಂಡು ಶ್ರೇಷ್ಠ ನಾಗರಿಕರಾಗಿ ಭಾರತದ ಬೆಳಕಾಗಿ ಎಂದು ಮಕ್ಕಳಿಗೆ ಶುಭ ಹಾರೈಸಿದರು.

ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷನಾದ ನಂತರ ನಾನು ಹಲವಾರು ಜಿಲ್ಲೆಗಳಿಗೆ ಭೇಟಿ ನೀಡುತ್ತಿದ್ದೇನೆ. ನನ್ನ ಭೇಟಿಯ ವೇಳೆ ಮೊದಲ ಆದ್ಯತೆ ಬಾಲಮಂದಿರಗಳಿಗೆ ಇರುತ್ತದೆ. ಅಲ್ಲಿ ಇರುವ ಮಕ್ಕಳು ತಂದೆ ತಾಯಿ ಇಲ್ಲದವರು, ಸಿಂಗಲ್ ಪೇರೆ–ಂಟ್ ಇರುವವರು ಹೀಗೆ ಹಲವಾರು ಸವಾಲುಗಳನ್ನು ಎದುರಿಸುತ್ತಿರುವ ಮಕ್ಕಳು ಬಾಲ ಮಂದಿರಗಳಲ್ಲಿ ಇರುವುದರಿಂದ ಅಂಥ ಮಕ್ಕಳ ಬದುಕು ಹಸನಾಗಿಸುವ ಕೆಲಸ ನಾವೆಲ್ಲರೂ ಮಾಡಬೇಕಾಗಿದೆ ಎಂದು ತಿಳಿಸಿದರು.

ಸರಕಾರ ಎಲ್ಲ ಸೌಲಭ್ಯಗಳನ್ನು ನೀಡಿದ್ದರೂ ಅದನ್ನು ಮಕ್ಕಳಿಗೆ ಸಮರ್ಪಕವಾಗಿ ತಲುಪಿಸುವಲ್ಲಿ ಕೆಲವು ಅಧಿಕಾರಿಗಳು ವಿಫಲರಾಗುತ್ತಿದ್ದಾರೆ. ಅಂಥವರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿ ಮಕ್ಕಳನ್ನು ಪ್ರೀತಿಪೂರ್ವಕವಾದ ಪರಿಸರದಲ್ಲಿ ಆರೋಗ್ಯ ಪೂರ್ಣವಾಗಿಸದೃಢನಾಗರಿಕರನ್ನಾಗಿಬೆಳೆಸಬೇಕಾದ ಜವಾಬ್ದಾರಿ ನಮ್ಮೆಲ್ಲರದು ಎಂದು ಅವರು ಹೇಳಿದರು. ಈ ಸಂದರ್ಭದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸೇರಿದಂತೆ ಬಾಲ ಮಂದಿರದ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

# ಕೋಮಲಾಪುರದಲ್ಲಿ ನೂತನ ಸರ್ಕಾರಿ ಪ್ರೌಢಶಾಲಾ ಪ್ರಾರಂಭಕ್ಕೆ ಶಿಕ್ಷಣ ಸಚಿವರಿಂದ ಚಾಲನೆ

## ಸರ್ಕಾರಿ ಶಾಲೆಗಳಲ್ಲಿ ಇನ್ಮುಂದೆ ಟ್ಯೂಶನ್ ಕ್ಲಾಸ್ ನೀಡಿ: ಎಸ್.ಮಧು ಬಂಗಾರಪ್ಪ



**ಕೊಪ್ಪಳ :** ಸರ್ಕಾರಿ ಶಾಲೆಗಳಲ್ಲಿ ಉತ್ತಮಶಿಕ್ಷಕರಿದ್ದು,ಇನ್ಮುಂದೆಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಅವಶ್ಯಕತೆ ಇರುವ ಮಕ್ಕಳಿಗೆ ಟ್ಯೂಶನ್ ಕ್ಲಾಸ್ ನೀಡಬೇಕು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಾದ ಎಸ್. ಮಧು ಬಂಗಾರಪ್ಪ ಅವರು ಶಾಲಾ ಮುಖ್ಯಸ್ಥರಿಗೆ ಹಾಗೂ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

2024–25ನೇ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಯೋಜನೆಯಡಿ ಮಂಜೂರಾದ ಜಿಲ್ಲೆಯ ಕುಕನೂರು ತಾಲ್ಲೂಕಿನ ಕೋಮಲಾಪುರ ಗ್ರಾಮದಲ್ಲಿ ನೂತನ ಸರ್ಕಾರಿ ಪ್ರೌಢಶಾಲಾ ಪ್ರಾರಂಭಕ್ಕೆ ಜುಲೈ 10ರಂದು ಶಾಲಾ ನಾಮಫಲಕ ಅನಾವರಣಗೊಳಿಸುವುದರ ಮೂಲಕಚಾಲನೆನೀಡಿ,ಬಳಿಕನಡೆದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಆರ್ಥಿಕವಾಗಿ ಹಿಂದುಳಿದವರಿಗೆ ಹಾಗೂ ಸಂಕಷ್ಟದಲ್ಲಿರುವವರ ಮಕ್ಕಳಿಗೆ ವಿದ್ಯಾಭ್ಯಾಸದ ಮೂಲಕ ಅವರನ್ನು ಮುನ್ನೆಲೆಗೆ ತರುವಂತಹ ಕೆಲಸವನ್ನು ಸರ್ಕಾರ ಮಾಡುತ್ತಿದ್ದು,ಈಭಾಗದದಶೈಕ್ಷಣಿಕ ಅಭಿವೃದ್ಧಿಗಾಗಿಕಲ್ಯಾಣಕರ್ನಾಟಕ ಪ್ರದೇಶಾಭಿವೃದ್ಧಿಮಂಡಳಿಯಿಂದ ವಿಶೇಷ ಅನುದಾನವನ್ನು ಮೀಸಲಿಡಲಾಗಿದೆ. ಮಕ್ಕಳಿಗೆ ಉತ್ತಮಗುಣಮಟ್ಟದಶಿಕ್ಷಣವನ್ನು ನೀಡಬೇಕೆಂಬುದುನಮ್ಮಸರ್ಕಾರದ ಮುಖ್ಯ ಉದ್ದೇಶವಾಗಿದ್ದು, ನೀಟ್ ಕ್ಲಾಸ್, ಸಿಇಟಿ ಪರೀಕ್ಷೆಯ ಪೂರ್ವಭಾವಿ ತರಬೇತಿಯನ್ನು ಸರ್ಕಾರದಿಂದಲೇ ಉಚಿತವಾಗಿ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಈ ತರಬೇತಿಗಾಗಿ ಈಗಾಗಲೇ ರೂ. 20 ಸಾವಿರ ಕೋಟಿಗಳ ಅನುದಾನವನ್ನು ಮುಖ್ಯಮಂತ್ರಿಗಳು ಬಜೆಟ್‌ನಲ್ಲಿ ಮೀಸಲಿಟ್ಟಿದ್ದಾರೆ.ಇದಲ್ಲದೆಸರ್ಕಾರಿ ಶಾಲೆಗಳಿಗೂ ಉಚಿತ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗಿದ್ದು, ಈ ಸೌಲಭ್ಯ ಸದುಪಯೋಗ ಆಗಬೇಕು. ಶಾಲೆಯ ತರಗತಿ ಅವಧಿ ಪೂರ್ಣಗೊಂಡ ಬಳಿಕ ಅವಶ್ಯಕತೆ ಇರುವ ವಿದ್ಯಾರ್ಥಿಗಳಿಗೆ ಟ್ಯೂಶನ್ ಕ್ಲಾಸ್ ನೀಡಲುಆಯಾಶಾಲೆಗಳಶಿಕ್ಷಕರು ಎಸ್.ಡಿ.ಎಂ.ಸಿ.ಯವರೊಂದಿಗೆ ಅನುಮತಿ ಹಾಗೂ ಗ್ರಾಮ ಪಂಚಾಯತ್ ಸಹಕಾರ ಪಡೆದು ಕ್ರಮ ಕೈಗೊಳ್ಳಬೇಕು. ರಾಜ್ಯದಲ್ಲಿ 53 ಸಾವಿರ ಶಿಕ್ಷಕರ ಕೊರತೆಯಿತ್ತು. 10 ತಿಂಗಳಲ್ಲಿ ಸುಮಾರು 12 ಸಾವಿರಕ್ಕೂಅಧಿಕಅತಿಥಿಶಿಕ್ಷಕರನ್ನು ನೇಮಕ ಮಾಡಲಾಗಿದೆ. ಹಂತ ಹಂತವಾಗಿ ಶಿಕ್ಷಕರನ್ನು ನೇಮಕ ಮಾಡಿಕೊಂಡುಈಸಮಸ್ಯೆಯನ್ನು ಸರಿಪಡಿಸಲಾಗುವುದು. ಅನುದಾನಿತ ಶಾಲೆಗಳು ಸಹ ಸರ್ಕಾರದ ಒಂದು ಭಾಗವಾಗಿ ಕೆಲಸ ಮಾಡುತ್ತವೆ. ಈ ಅನುದಾನಿತ ಶಾಲೆಗಳಲ್ಲಿ 2015 ರಿಂದ 2024ರವರೆಗೆ ಕಳೆದ 9 ವರ್ಷಗಳಿಂದಶಿಕ್ಷಕರನ್ನುಪಡೆದಿಲ್ಲ. ಇಂತಹ ಶಾಲೆಗಳಲ್ಲಿಯೂ ಸಹ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಹಾಗೂ ರಾಜ್ಯದಲ್ಲಿ 10 ರಿಂದ 18 ಸಾವಿರ ಸರ್ಕಾರಿ ಶಿಕ್ಷಕರ ನೇಮಕಕ್ಕೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗಿದೆ ಎಂದರು.

ತಳಕಲ್ ಗ್ರಾಮದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ನಿರ್ಮಾಣ ಮಾಡಿರುವುದು ಅತ್ಯಂತಹೆಮ್ಮೆಯವಿಷಯವಾಗಿದೆ. ಇಂಜಿನಿಯರಿಂಗ್ ಕಾಲೇಜು ಭೇಟಿ ಸಂದರ್ಭದಲ್ಲಿಂದು ನಮ್ಮ ಸೊರಬ ಕ್ಷೇತ್ರ ವಿದ್ಯಾರ್ಥಿ ಇಲ್ಲಿ ಇಂಜಿನಿಯರಿಂಗ್ ವಿದ್ಯಾಭ್ಯಾಸ ಮಾಡುತ್ತಿರುವುದು ಕಂಡುಬಂತು. ತಳಕಲ್ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಯಾವುದೇ ಖಾಸಗಿ ಕಾಲೇಜುಗಳಿಗೆ ಕಡಿಮೆಯಿಲ್ಲ ಎಂಬಂತೆ ನಿರ್ಮಾಣವಾಗಿದೆ. ಸರ್ಕಾರದ ಹಣದಲ್ಲಿ ಬಡ ಮಕ್ಕಳು ಸಹ ಒಳ್ಳೆಯ ರೀತಿಯಲ್ಲಿ ಶಿಕ್ಷಣವನ್ನು ಪಡೆಯಬೇಕು ಎಂಬ ಕನಸನ್ನು ನನಸು ಮಾಡಿದ ಕೀರ್ತಿ ಬಸವರಾಜ ರಾಯರೆಡ್ಡಿ ಅವರಿಗೆ ಸಲ್ಲುತ್ತದೆ ಎಂದು ಹೇಳಿದರು.

ರಾಜ್ಯ ಸರ್ಕಾರವು ಅನ್ನಭಾಗ್ಯ, ಗೃಹಲಕ್ಷ್ಮೀ, ಶಕ್ತಿ, ಗೃಹಜ್ಯೋತಿ, ಶಕ್ತಿ,ಯುವನಿಧಿ ಸೇರಿದಂತೆ ವಿವಿಧ ಜನಪರ ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ. ಮಾಜಿ ಮುಖ್ಯಮಂತ್ರಿಗಳಾದ ಬಂಗಾರಪ್ಪನವರು ಅಂದಿನ ಕಾಲದಲ್ಲಿರೈತರಪಂಪ್‌ಸೆಟ್‌ಗಳಿಗೆ ಉಚಿತವಿದ್ಯುತ್‌ನೀಡಿ,ರೈತರಬಾಳಿಗೆ ಬೆಳಕಾದರೆ,ಇಂದುಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ರಾಜ್ಯ ಸರ್ಕಾರವು ಗೃಹಜ್ಯೋತಿ ಯೋಜನೆಯನ್ನು ಜಾರಿಗೆ ಮಾಡುವುದರ ಮೂಲಕ ಪ್ರತಿಯೊಂದು ಮನೆಗೆ ಉಚಿತ ಬೆಳಕನ್ನು ನೀಡಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸವರಾಜ ರಾಯರಡ್ಡಿ ಅವರು ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ನಮ್ಮ ರಾಜ್ಯ ಸರ್ಕಾರವು ವಿವಿಧ ಯೋಜನೆಗಳಡಿ ಹಾಗೂ ವಿಶೇಷವಾಗಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಯೋಜನೆಯಡಿ ಶಾಲೆ,ಜೂನಿಯರ್‌ಕಾಲೇಜುಗಳು, ಪದವಿ ಕಾಲೇಜುಗಳನ್ನು ಪ್ರಾರಂಭಿಸಲಾಗುತ್ತಿದೆ. ನಮ್ಮ ಸರ್ಕಾರವುಜಾರಿಗೆತಂದುಐದ್ಯಾ–ರೆಂಟಿಯೋಜನೆಗಳಲ್ಲಿಅನ್ನಭಾಗ್ಯ ಯೋಜನೆಯಡಿ 4 ಕೋಟಿ 37 ಲಕ್ಷ ಜನಕ್ಕೆ 10 ಕೆ.ಜಿ. ಆಹಾರ ಧಾನ್ಯಗಳನ್ನು ಕೊಡಲಾಗುತ್ತಿದ್ದು, ಶೇ.85.3 ರಷ್ಟು ಜನರಿಗೆ ಆಹಾರಧಾನ್ಯಗಳು ತಲುಪುತ್ತಿವೆ. ಈ ಪ್ರಕ್ರಿಯೆ ತಮಿಳುನಾಡಿನಲ್ಲಿ ಶೇ.40, ಮಹಾರಾಷ್ಟ್ರದಲ್ಲಿ ಶೇ.60, ಗುಜರಾತ್ ರಾಜ್ಯದಲ್ಲಿ ಶೇ.50 ರಷ್ಟಿದ್ದು, ಇಡೀ ಭಾರತ ದೇಶದಲ್ಲಿ ಅತಿ ಹೆಚ್ಚಿನ ಆಹಾರಧಾನ್ಯಗಳನ್ನು ಉಚಿತವಾಗಿ ನೀಡುತ್ತಿರುವ ರಾಜ್ಯ ನಮ್ಮ ಕರ್ನಾಟಕವಾಗಿದೆ. ಗೃಹಲಕ್ಷ್ಮೀ ಯೋಜನೆಯಡಿ 1.29 ಕೋಟಿಮಹಿಳೆಯರಿಗೆಪ್ರತಿತಿಂಗಳು ರೂ. 2 ಸಾವಿರ ನೀಡಲಾಗುತ್ತಿದೆ. ಶಕ್ತಿ ಯೋಜನೆಯಡಿ ರಾಜ್ಯದ ಎಲ್ಲಾ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದ ವ್ಯವಸ್ಥೆಯನ್ನು ಜಾರಿಗೆ ತಂದಿದ್ದು, ಪ್ರತಿದಿನ ಸರಾಸರಿ 63 ಲಕ್ಷ ಮಹಿಳೆಯರು ಈ ಯೋಜನೆಯ ಲಾಭವನ್ನು ಪಡೆದುಕೊಂಡಿದ್ದಾರೆ.1.24ಕೋಟಿ ಮನೆಗಳಿಗೆ ಗೃಹಜ್ಯೋತಿಯಡಿ 200 ಯುನಿಟ್ ಉಚಿತ ವಿದ್ಯುತ್ ನೀಡಲಾಗಿದೆ. ಉದ್ಯೋಗನಿಧಿ ಯೋಜನೆಗೆ 5 ಕೋಟಿಯನ್ನು ನೀಡಲಾಗಿದೆ ಎಂದರು.

ಕ್ಷೇತ್ರದಲ್ಲಿಶಿಕ್ಷಣಕ್ಕೆಮೊದಲಆದ್ಯತೆ: ತಾವು 1985ರಲ್ಲಿ ಶಾಸಕರಾದಾಗ ಯಲಬುರ್ಗಾ ಕ್ಷೇತ್ರದಲ್ಲಿ ಕೇವಲ 7 ಶಾಲೆಗಳಿದ್ದವು. ಈ ಸಂಖ್ಯೆಯನ್ನು ಈಗ 60ಕ್ಕೆ ಏರಿಸಲಾಗಿದೆ. ಈ ಕ್ಷೇತ್ರಕ್ಕೆ ಇಂಜಿನಿಯರಿಂಗ್ ಕಾಲೇಜು, ಜೂನಿಯರ್ ಕಾಲೇಜು, ಡಿಪ್ಲೋಮಾ, ಪದವಿ ಕಾಲೇಜುಗಳನ್ನು ತರಲಾಗಿದ್ದು, ಶಿಕ್ಷಣಕ್ಕೆ ಮೊದಲ ಆದ್ಯತೆ ನೀಡಿ ಈ ಭಾಗದ ಶೈಕ್ಷಣಿಕ, ಆರ್ಥಿಕ ಅಭಿವೃದ್ಧಿಗಾಗಿ ಶ್ರಮಿಸಿದ್ದೇನೆ ಎಂದ ಅವರು, ಕೋಮಲಾಪುರ ಪ್ರೌಢಶಾಲೆಗೆ 4 ಎಕರೆ ಜಮೀನು ಹಾಗೂ ಕೆರೆ ತುಂಬಿಸುವ ಯೋಜನೆಗೂ ಜಮೀನು ಅವಶ್ಯಕತೆಇದ್ದು,ರೈತರುಜಮೀನು ನೀಡಲು ಮುಂದೆ ಬರಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿಗಳಾದ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿಗಳಾದ ಡಿ.ಮಂಜುನಾಥ, ಡಿವೈಎಸ್ಪಿ ಮುತ್ತಣ್ಣ ಸವರಗೋಳ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಶ್ರೀಶೈಲ್ ಬಿರಾದಾರ್, ಭಾನಾಪುರ ಗ್ರಾ.ಪಂ ಅಧ್ಯಕ್ಷರಾದ ಕರಿಯಪ್ಪ ಬಿ.ಹೆಚ್., ಸದಸ್ಯರಾದಮುತ್ತಮ್ಮಬಿ.ಕೆಹಾಗೂ ಮೈಲಾರಗೌಡಬಿ.ಎಂಸೇರಿದಂತೆ, ತಹಶೀಲ್ದಾರರು, ತಾ.ಪಂ ಇಒ, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷರು, ಸದಸ್ಯರು, ಶಾಲೆಯ ಮುಖ್ಯೋಪಾಧ್ಯಾಯರು ಮತ್ತು ಶಿಕ್ಷಕರು,ಜನಪ್ರತಿನಿಧಿಗಳುಹಾಗೂ ಮುಖಂಡರು ಉಪಸ್ಥಿತರಿದ್ದರು.

ವಿವಿಧ ಕಾರ್ಯಕ್ರಮಗಳಿಗೆ ಸಚಿವರಿಂದ ಚಾಲನೆ: ಜುಲೈ 10 ರಂದು ಕೊಪ್ಪಳ ಜಿಲ್ಲೆಯಲ್ಲಿ ಪ್ರವಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಾದ ಎಸ್. ಮಧು ಬಂಗಾರಪ್ಪ ಅವರು ಕುಕನೂರು ತಾಲ್ಲೂಕಿನ ತಳಕಲ್ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಲಾದ ಹೆರಿಗೆ ಆಸ್ಪತ್ರೆ, ಕೋಮಲಾಪುರದ ನೂತನ ಸರ್ಕಾರಿ ಪ್ರೌಢಶಾಲೆ, ಯಲಬುರ್ಗಾ ತಾಲ್ಲೂಕಿನ ಕರಮುಡಿ ಗ್ರಾಮದ ನೂತನ ಪದವಿ ಪೂರ್ವ ಕಾಲೇಜು ಹಾಗೂ ದಮ್ಮೂರಿನ ನೂತನ ಸರ್ಕಾರಿ ಪ್ರೌಢಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮಗಳಿಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸವರಾಜ ರಾಯರಡ್ಡಿ ಸೇರಿದಂತೆ ಮತ್ತಿತರರಿದ್ದರು.

# ಅಕ್ಕ ಮಹಾದೇವಿ ವಿವಿಯಲ್ಲಿ ವಿದ್ಯಾರ್ಥಿನಿಯರ ವಸತಿ ನಿಲಯ ಆರಂಭಕ್ಕೆ ದಲಿತ ವಿದ್ಯಾರ್ಥಿ ಪರಿಷತ್ ಆಗ್ರಹ



**ವಿಜಯಪುರ :** ನಗರದಲ್ಲಿ ಇರುವ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ನೂತನ ವಸತಿ ನಿಲಯ ಮಂಜೂರು ಮಾಡಲು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಶಿ ಆನಂದ ಅವರಿಗೆ ದಲಿತ ವಿದ್ಯಾರ್ಥಿ ಪರಿಷತ್ ವತಿಯಿಂದ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ದಲಿತ ವಿದ್ಯಾರ್ಥಿ ಪರಿಷತ್ ಮುಖಂಡ ಅಕ್ಷಯಕುಮಾರ ಅಜಮನಿ ಮಾತನಾಡಿ, ಕರ್ನಾಟಕ ರಾಜ್ಯದ ಹಾಗೂ ವಿಜಯಪುರ ಜಿಲ್ಲೆಯಲ್ಲಿ ಇರುವ ಏಕೈಕ ಮಹಿಳಾ ವಿಶ್ವವಿದ್ಯಾಲಯವಾದ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯಕ್ಕೆ ರಾಜ್ಯದ ನಾನಾ ಭಾಗಗಳಿಂದ ಉನ್ನತ ವಿದ್ಯಾಭ್ಯಾಸಕ್ಕಾಗಿ ವಿದ್ಯಾರ್ಥಿಗಳು ಆಗಮಿಸುತ್ತಿದ್ದಾರೆ, ಈ ವರ್ಷವೂ ಕೂಡಾ ಹೆಚ್ಚಿನ ವಿದ್ಯಾರ್ಥಿನಿಯರು ಕೋರ್ಸ್‌ಗಳಿಗೆ ಪ್ರವೇಶ ಪಡೆದುಕೊಂಡಿರುವುದರಿಂದ ವಿದ್ಯಾರ್ಥಿಗಳಿಗೆ ಕ್ಯಾಂಪಸ್‌ನಲ್ಲಿ ಈಗಿರುವ ವಸತಿ ನಿಲಯಗಳಲ್ಲಿ ಅವಕಾಶ ಸಿಗದೇ ಹೊರಗಡೆ ರೂಮ್ ಮಾಡಿಕೊಂಡು ಓದುವುದು ಕಷ್ಟದ ಸಂಗತಿ ಆಗಿದೆ, ಅದರಲ್ಲೂ ಕಾಲೇಜಿನ ಸಮಯಕ್ಕೆ ಸರಿಯಾಗಿ ಬಸ್‌ಗಳಿಲ್ಲದೆ ಕ್ಲಾಸ್‌ಗಳನ್ನು ತಪ್ಪುವ ಸಂಭವ ಉಂಟಾಗಿದೆ. ಪ್ರತಿದಿನ ಕಾಲೇಜಿನಿಂದ ರೂಮಿಗೆ ರೂಮಿನಿಂದ ಕಾಲೇಜಿಗೆ ಓಡಾಡುವದರಿಂದ ವಿದ್ಯಾಭ್ಯಾಸದಲ್ಲಿ ಕುಂಠಿತವಾಗುತ್ತಿದೆ ಎಂದಿದ್ದಾರೆ.

ಅದಕ್ಕಾಗಿ ಹೆಣ್ಣು ಮಕ್ಕಳ ರಕ್ಷಣೆ ಮತ್ತು ಹಿತದೃಷ್ಟಿಯಯಿಂದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ರಾಜ್ಯ ಸರ್ಕಾರ ನೂತನವಾಗಿ ಮಂಜುರಾಗಿರುವ ವಸತಿ ನಿಲಯಗಳಲ್ಲಿ ಎರಡನ್ನು ವಿಶ್ವವಿದ್ಯಾಲಯದ ಕ್ಯಾಂಪಸ್ ಒಳಗಡೆ ಸ್ಥಾಪಿಸಬೇಕೆಂದು ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ಮಾದೇಶ ಚಲವಾದಿ, ಸತೀಶ ಅಂಜುಟಗಿ, ಯಾಸೀನ ಇನಾಮಾದಾರ, ಸಂದೇಶ ಕುಮಟಗಿ, ರವಿ ವಾಲಿಕಾರ, ಪ್ರವೀಣ ಬನಸೋಡೆ, ಸೇರಿದಂತೆ ಮುಂತಾದವರು ಭಾಗಿಯಾಗಿದ್ದರು.

# ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ವಸತಿ ನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಕೊಪ್ಪಳ :** 2024–25 ನೇ ಸಾಲಿಗಾಗಿ ಕೊಪ್ಪಳ ಮತ್ತು ಕುಷ್ಟಗಿ ತಾಲ್ಲೂಕಿನಲ್ಲಿರುವ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಸತಿ ನಿಲಯಗಳ ಪ್ರವೇಶಕ್ಕೆ ಆನ್‌ಲೈನ್ ಮೂಲಕ(ಎಸ್‌ಎಚ್‌ಪಿ ಪೋರ್ಟಲ್) ಅರ್ಜಿಯನ್ನು ಆಹ್ವಾನಿಸಲಾಗಿದೆ.

ಕೊಪ್ಪಳದ ವಿಜಯನಗರ ಬಡಾವಣೆ, ಬಿಲಾಲ ನಗರ, ಆರೋಗ್ಯ ಬಡಾವಣೆ ಹಾಗೂ ಕುಷ್ಟಗಿಯ ಶಾಖಾಪುರ ರಸ್ತೆಯ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ, ಕೊಪ್ಪಳ–1 ಮತ್ತು ಕೊಪ್ಪಳ–2 ಗಣೇಶ ತೆಗ್ಗಿನ ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕಿಯರ ವಸತಿ ನಿಲಯಗಳಿಗೆ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ಆಗಸ್ಟ್ 05 ಕೊನೆಯ ದಿನವಾಗಿದ್ದು, ಪೋಷಕರು/ವಿದ್ಯಾರ್ಥಿಗಳು ವೆಬ್‌ಸೈಟ್ ವಿಳಾಸ https://shp.karnataka.gov.in/ ಮೂಲಕ ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸಿ ಅರ್ಜಿ ಪ್ರತಿ ಹಾಗೂ ಎಲ್ಲಾ ದಾಖಲೆಗಳನ್ನು ಸಂಬಂಧಿಸಿದ ವಸತಿ ನಿಲಯಗಳಿಗೆ ನೀಡಬೇಕು.

ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಸರ್ಕಾರಿ ಅಥವಾ ಅಂಗೀಕೃತ ಕಾಲೇಜುಗಳಲ್ಲಿ ಮೆಟ್ರಿಕ್ ನಂತರದ ತರಗತಿಗಳಲ್ಲಿ ಅಭ್ಯಾಸ ಮಾಡುತ್ತಿರಬೇಕು. ವಸತಿ ನಿಲಯಗಳಲ್ಲಿ ಶೇ.75 ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಮತ್ತು ಶೇ.25 ಇತರೆ ವರ್ಗದವರಿಗೆ ಮೀಸಲಿಡಲಾಗಿದೆ. ಅಲ್ಪಸಂಖ್ಯಾತರ ವಿದ್ಯಾರ್ಥಿಗಳ ಕುಟುಂಬ, ಹಿಂದುಳಿದ ವರ್ಗಗಳಾದ 2ಎ, 2ಬಿ, 3ಎ, 3ಬಿ ವಿದ್ಯಾರ್ಥಿಗಳ ಕುಟುಂಬ ಹಾಗೂ ಪರಿಶಿಷ್ಟ ಜಾತಿ & ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನವು 2.50 ಲಕ್ಷ ರೂ.ಗಳಿಗಿಂತ ಮೀರಿರಬಾರದು. ಪ್ರವರ್ಗ–1 ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನವು 1.00 ಲಕ್ಷ ರೂ.ಗಳಿಗಿಂತ ಮೀರಿರಬಾರದು. ಅರ್ಜಿಯೊಂದಿಗೆ ತಹಶೀಲ್ದಾರ ನೀಡಿದ ಜಾತಿ ಮತ್ತು ಆದಾಯ ದೃಢೀಕರಣ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಕಾಲೇಝಿನ ಪ್ರವೇಶ ಶುಲ್ಕದ ರಸೀತಿ ಪ್ರತಿ, ಅಂಕಪಟ್ಟಿ ಹಾಗೂ ವಿದ್ಯಾರ್ಥಿಯ ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ 4 ಭಾವಚಿತ್ರಗಳೊಂದಿಗೆ ಮತ್ತು ನಿಗದಿ ಪಡಿಸಿದ ದಿನಾಂಕದೊಳಗಾಗಿ ಅರ್ಜಿಯನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನ ಅಜಾದ್ ಭವನ ಕೊಪ್ಪಳ, ಜಿಲ್ಲಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಮತ್ತು ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಕುಷ್ಟಗಿ ಹಾಗೂ ಹತ್ತಿರದ ವಸತಿ ನಿಲಯಗಳಿಗೆ ಭೇಟಿ ನೀಡಬಹುದು ಎಂದು ಕೊಪ್ಪಳ ತಾಲ್ಲೂಕು ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿ ರವಿ ಪೂಜಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಷಾಡಮಾಸ "ಗುಳ್ಳವನ ಪೂಜೆ" ಮರೆಯಾಗುತ್ತಿದೆ



ಉತ್ತರಕರ್ನಾಟಕ ಗ್ರಾಮೀಣಭಾಗದಲ್ಲಿ ಮಣ್ಣಿನಪೂಜೆಗಳು ನಾನಾರೂಪದಲ್ಲಿ ಮಾಡಿಭೂಮಿತಾಯಿಯನ್ನು ಮಳೆ-ಬೆಳೆ ನೀಡಿ ರೈತಬಾಂಧವನ್ನು ರಕ್ಷಿಸಲು ಪ್ರಾರ್ಥಿಸುವ ಸಂಪ್ರದಾಯವಾಗಿದೆ.ಕೃಷಿಪ್ರಧಾನವಾದ ಎಲ್ಲ ಧರ್ಮದಮನೆತನದವರು. ಭೂಮಿಯನ್ನು ಪೂಜಿಸುವ ರೂಢಿ ಹಿರಿಯರಿಂದಲೇ ಬಂದ ಸಂಸ್ಕೃತಿಎನ್ನ ಬಹುದು.ಇತ್ತೀಚಿಗೆ ಮೊಬೈಲ್‌ಯುಗ, ನಗರೀಕರಣಬೆಳೆದಂತೆ ಭಾರತೀಯ ಗ್ರಾಮೀಣ ಹಬ್ಬಗಳು ಕಣ್ಮರೆಯಾಗುವದು ವಿಷಾದಸಂಗತಿ ಹೀಗೆ ಆಗದಂತೆ ನಾವೆಲ್ಲರೂಮನಪೂರ್ತಿಹಬ್ಬಗಳನ್ನು ಸಂಪ್ರದಾಯದಂತೆ ಆಚರಿಸಿ,ಮಕ್ಕಳಿಗೆ ಅವುಗಳ ಮಹತ್ವತಿಳಿಸಿಕೊಡಬೇಕು. ಪ್ರತಿಮಾಸಗಳಿಗೆ ಸನಾತನಧರ್ಮದಲ್ಲಿ ವೈಶಿಷ್ಠತೆಯಿರುವದರಿಂದ ಆಷಾಡಮಾಸದಲ್ಲಿ ಬರುವ ಮಂಗಳವಾರಗಳು 'ಗುಳ್ಳವ್ವ,ನವಾರವೆಂದು ಭಕ್ತಿಯಿಂದ ಪೂಜಿಸುವರು. ಕುಂಬಾರಮನೆಯಿಂದ ಅಥವಾ ಮನೆಯಲ್ಲಿ ಹದವಾದ,ಶುದ್ಧವಾದ ಮಣ್ಣಿನಿಂದ ಗುಳ್ಳವ್ವನನ್ನು ತಯಾರಿಸಿ ನಾನಾ ಅಲಂಕಾರಗಳಿಂದ ಭಕ್ತಿ ಪೂರ್ವಕವಾಗಿ ಹೆಣ್ಣುಮಕ್ಕಳು ಪೂಜಿಸುವ ಪದ್ಧತಿಯಿರುವದು. ಸಾಯಂಕಾಲ ಚಿಕ್ಕಹೆಣ್ಣುಮಕ್ಕಳು ಕೂಡಿ ಗುಳ್ಳವ್ವನನ್ನು ತಟ್ಟೆಯಲ್ಲಿಟ್ಟು ಮನೆಅಂಗಳದಲ್ಲಿ ಗುಲಗಂಜಿ ಕುಸುಬಿ ಹೂವುಗಳನ್ನೇರಿಸಿ ಆರತಿಮಾಡಿ ಜಾನಪದ ಹಾಡುಗಳನ್ನು ಹಾಡುತ್ತಾ ನಲಿಯುವರು ಅವರೊಂದಿಗೆ ಹಿರಿಯಹೆಣ್ಣುಮಕ್ಕಳು ಭಾಗವಹಿಸಿ ಮನರಂಜನೆಯಿಂದ ಸಂತೋಷಪಡುತ್ತಾರೆ. ಹಿಂದೂಗಳು ಮಳೆಗಾಲ ಪ್ರಾರಂಭವಾಗುವಂತೆ ಹಬ್ಬಗಳ ಮುನ್ನಡೆಯಾಗಿ ಪ್ರಕೃತಿದೇವತೆಯಾದ ಮಣ್ಣನ್ನು ನಾನಾ ದೇವತೆಗಳ ರೂಪಗಳಿಂದ ಪೂಜಿಸಿ ರೈತರು,ಕುಟುಂಬ ಗ್ರಾಮಹಾಗೂ ದೇಶ ಸುಖ-ಸಮೃದ್ಧಿ ಹೊಂದಲಿಯೆಂಬ ಉದ್ದೇಶವೇ ಹಬ್ಬಗಳು ಅನ್ನ ಕೊರತೆಯಾಗದಿರಲಿ ಹಸಿರು



ಕ್ರಾಂತಿ ಹರಡಲಿಯೆಂದು ಗುಳ್ಳವ್ವಳಿಗೆ ಬೇಡಿ-ಕೊಂಡು ಹಾರೈಸುವರು. ಆಷಾಢಮಾಸ ಎಲ್ಲಾ ಮಂಗಳವಾರ ಪೂಜೆಮಾಡಿ ಕೊನೆಯ ಮಂಗಳವಾರ ವೈಭವದಿಂದ ಪೂಜೆ ನಾನಾ ತರಹದ ಖಾದ್ಯ ಸಿಹಿತಿಂಡಿಗಳನ್ನು ಮಾಡಿ ನೇವೆದ್ಯ ತೋರಿಸಿ ಸಾಮೂಹಿಕ ಊಟಮಾಡಿ ಮುಕ್ತಾಯಗೊಳಿಸುವರು.ಅತ್ತೆಮನೆಯಿಂದ ತವರುಮನೆಗೆ ಹೆಣ್ಣುಮಕ್ಕಳು ಬಂದು ಪೂಜಿಸಿ ಉಡುಗೊರೆ ಪಡೆದುಕೊಂಡು ಹೋಗುವರು. ಮಣ್ಣಿನಕೊರತೆ, ಕುಂಬಾರರ ಕುಶಲತೆ, ಅಭಾವಗಳಿಂದಲೂ ಆಚರಿಸುವ ಈ ಹಬ್ಬದ ಪ್ರಮಾಣ ಇಳಿಕೆಯಾಗಿದೆ. ಹಿರಿಯರು ಮನೆಯಲ್ಲಿ ಪೌರಾಣಿಕ ಕಥೆ ಹಬ್ಬಗಳ ವಿಶೇಷತೆ ಹೇಳಿ,ಮತ್ತೇ ಮರೆಯಾಗುವ ಹಬ್ಬಗಳಿಗೆ ಉತ್ತೇಜನ ನೀಡಬೇಕು ನಾವೆಲ್ಲರೂ ಸಂಪ್ರದಾಯ-ಸಂಸ್ಕೃತಿ ಸಂಸ್ಕಾರ ಉಳಿಸೋಣ ಪರಿಸರ ಪ್ರಕೃತಿ ನೈಸರ್ಗಿಕ ಸಂಪತ್ತು ರಕ್ಷಿಸೋಣ ಹಸಿರು ದೇಶದ ಉಸಿರು ನಾವೆಲ್ಲರೂ ಭೂಮಿತಾಯಿಗೆ ನಮಿಸೋಣ ಪ್ರಾರ್ಥಿಸೋಣ ಸುಭದ್ರನಾಡಾಗಲಿ

– ಗೀತಾ. ಸಂ. ಮಿರ್ಜಿ

# ಗಿಡ ಮರಗಳನ್ನು ಬೆಳಸುವದರಿಂದ ನೆಲ-ಜಲ ಸಂರಕ್ಷಣೆ

**ಧಾರವಾಡ :** ಅರಣ್ಯ ಪ್ರದೇಶದಲ್ಲಿ ಪ್ರಾಣಿ, ಪಕ್ಷಿಗಳುಯಾವುದೇವೈದ್ಯಕೀಯಉಪಚಾರ ವಿಲ್ಲದೇ ಆರೋಗ್ಯದಿಂದ ಬದುಕುತ್ತವೆ, ಇದಕ್ಕೆ ಕಾರಣ ನಿಸರ್ಗ. ನಿಸರ್ಗದೊಂದಿಗೆ ನಮ್ಮ ಜೀವನವನ್ನು ಸಮ್ಮಿಳಿತ ಮಾಡಿದರೆ, ನಿಸರ್ಗ ರೋಗನಿರೋಧಕ ಶಕ್ತಿಯನ್ನು ಕೊಡುತ್ತದೆ. ಮರಗಳು ಭೂಮಿಯ ಫಲವತ್ತತೆಯನ್ನು ಹೆಚ್ಚಿಸುವುದಲ್ಲದೇ ಮಣ್ಣಿನಲ್ಲಿ ನೀರನ್ನು ಹಿಡಿದಿಟ್ಟುಕೊಳ್ಳುವ ಶಕ್ತಿಯನ್ನು ಹೆಚ್ಚಿಸುತ್ತವೆ ಎಂದು ನಿವೃತ್ತ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ವಿಜಯಕುಮಾರ ಗೋಗಿ ಅವರು ಹೇಳಿದರು.

ಅವರು ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆ (ವಾಲ್ಮಿ) ಆವರಣದಲ್ಲಿ ಆಯೋಜಿಸಿದ ವನಮಹೋತ್ಸವ-2024 ಕಾರ್ಯಕ್ರಮವನ್ನು ಸಸಿಗಳನ್ನು ನೆಡುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು,

ಅಣೆಕಟ್ಟು ಪ್ರದೇಶದ ಮೇಲ್ಭಾಗದ ಪ್ರದೇಶದಲ್ಲಿ ಅರಣ್ಯದ ಮಹತ್ವ ಹೆಚ್ಚಾಗಿದೆ. ಮಳೆ ನೀರು ಹರಿದು ಬರುವ ಸಂದರ್ಭದಲ್ಲಿ ಮೇಲ್ಮಣ್ಣನ್ನೂ ಹೊತ್ತು ತರುವುದರಿಂದ ಅಣೆಕಟ್ಟೆಗಳಲ್ಲಿ ಹೂಳಿನ ಪ್ರಮಾಣ ಹೆಚ್ಚಾಗಿ ಯೋಜನೆಯ ಉದ್ದೇಶ ಈಡೇರುವುದಿಲ್ಲ. ಆದ್ದರಿಂದ ಹೆಚ್ಚು ಮರಗಿಡಗಳನ್ನು ನೆಡುವುದರ ಮೂಲಕ ನೀರಿನ ಹರಿವಿನ ವೇಗವನ್ನು ತಗ್ಗಿಸಿ ಭೂಮಿಯ ಸಂರಕ್ಷಣೆ ಮಾಡಬಹುದು. ವೃಕ್ಷಗಳು ಬರಿ ವೃಕ್ಷಗಳಲ್ಲ ಅವು ದೇವರು ಕೊಟ್ಟ ವರಗಳು. ಸೃಷ್ಟಿಯಲ್ಲಿನ ಎಲ್ಲ ಜೀವರಾಶಿಯ ಜೊತೆಗೆ ಸಹಭಾಳ್ವೆ ಮಾಡಬೇಕಾದರೆ ನಾವು ಬದುಕುವುದರ



ಜೊತೆಗೆ ಇತರೆ ಜೀವಿಗಳು ಬದುಕಲು ಅವಕಾಶ ಮಾಡಿಕೊಡಬೇಕು. ಅದಕ್ಕಾಗಿ ಹೆಚ್ಚು ಹೆಚ್ಚು ಗಿಡ ಮರಗಳನ್ನು ಬೆಳೆಸಬೇಕು ಎಂದು ಅವರು ತಿಳಿಸಿದರು.

ಮನುಷ್ಯ ನಿಸರ್ಗದ ಜೊತೆ ಸಮೀಕರಣಗೊಂಡು ಬಾಳಬೇಕು. ಗಿಡಮರಗಳು ದೈವಸಮಾನವೆಂದು ನಮ್ಮ ಪೂರ್ವಜರು ಹೇಳಿದ್ದಾರೆ. ಆದ-ರೆ ಮನುಷ್ಯ ಅಭಿವೃದ್ಧಿಯ ಪಥದಲ್ಲಿ ನಿಸರ್ಗಕ್ಕೆ ಸಾಕಷ್ಟು ಹಾನಿ ಮಾಡುತ್ತಿದ್ದಾನೆ. ಸಕಲ ಜೀವರಾಶಿಗಳಿಗೂ ನಿಸರ್ಗವೇ ಆಶ್ರಯತಾಣವೆಂದರು. ಪ್ರತಿಯೊಬ್ಬರು ಪ್ರತಿವರ್ಷಒಂದುಗಿಡನೆಟ್ಟುಪೋಷಿಸುವುದು ಇಂದಿನ ಅನಿವಾರ್ಯವಾಗಿದೆಯೆಂದರು.

ಧಾರವಾಡ ಪೀಠ ಕರ್ನಾಟಕ ಉಚ್ಚನ್ಯಾಯಾಲಯದ ಅಪರ ವಿಲೇಖನಾಧಿಕಾರಿ ಶಾಂತವೀರ ಶಿವಪ್ಪ ಅವರು ಮಾತನಾಡಿ, ವನ್ಯ ಸಂಪತ್ತಿನ ರಕ್ಷಣೆ ಕೇವಲ ಇಲಾಖೆಯ ಕಾರ್ಯವಲ್ಲ. ಪ್ರತಿಯೊಬ್ಬ ನಾಗರೀಕರು ಗಿಡಗಳನ್ನು ನೆಡುವುದರ ಜೊತೆಗೆ ಸಂಕರಕ್ಷಣೆ ಜವಾಬ್ದಾರಿಯನ್ನು ವಹಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ವಾಲ್ಮಿ ಸಂಸ್ಥೆಯ ನಿರ್ದೇಶಕ ಡಾ. ರಾಜೇಂದ್ರ ಪೋದ್ದಾರ ಅವರು ಮಾತನಾಡಿ, ಜಾಗತೀಕರಣ, ವಾಣಿಜ್ಯೀಕರಣ ಮತ್ತು ನವ ಉದಾರೀಕರಣ, ಅರ್ಥಶಾಸ್ತ್ರ ಸಿದ್ಧಾಂತ ಅಡಿಯಲ್ಲಿ ಲಾಭವೇ ಸರ್ವಸ್ವ ಆಗಿರುವಾಗ ವೈಯಕ್ತಿಕ ಲಾಭಕ್ಕಾಗಿ ನೈಸರ್ಗಿಕ ಸಂಪನ್ಮೂಲಗಳ ಹನನವಾಗುತ್ತಿದೆ. ಭಾರತ ಸಾವಿರಾರು ವರ್ಷಗಳಿಂದ ತನ್ನದೇ ಆದ ಸುಸ್ಥಿರ ಅರ್ಥಶಾಸ್ತ್ರದ ಸಿದ್ಧಾಂತಗಳನ್ನು ಮೈಗೂಡಿಸಿಕೊಂಡಿದೆ. ಭಕ್ತಿ ಪರಂಪರೆ, ವಚನ ಪರಂಪರೆಗಳ ಆಧಾರದ ಮೇಲೆ ನಿಸರ್ಗದ ಸಂಪನ್ಮೂಲಗಳ ಸಂರಕ್ಷಣೆಯನ್ನು ಸಾಧಿಸಲಾಗುತ್ತಿತ್ತು. ಇದೀಗ ಪಾಶ್ಚಿಮಾತ್ಯ ಸಂಸ್ಕೃತಿಯ ಪ್ರಭಾವದಿಂದ ಲಾಭಕೋರತನ ಮತ್ತು ಕೊಳ್ಳುಬಾಕತನ ಹೆಚ್ಚಾಗುತ್ತಿರುವುದು ವನ್ಯ ಸಂಪನ್ಮೂಲದ ನಾಶಕ್ಕೆ ಕಾರಣವಾಗುತ್ತಿದೆ. ಇದನ್ನು ತಡೆಗಟ್ಟು ಜಾಗೃತಿ ಹಾಗೂ ಅನುಷ್ಠಾನ ಅವಶ್ಯಕವಾಗಿದೆ ಎಂದು ತಿಳಿಸಿದರು.

ಭಾರತೀಯರು ನಿಸರ್ಗವನ್ನು ಭೂತಾಯಿಯನ್ನು ದೈವತ್ವಕ್ಕೆ ಹೋಲಿಸಿ ನಿಸರ್ಗಕ್ಕನುಗುಣವಾಗಿ ಸುಸ್ಥಿರ ಜೀವನ ನಡೆಸುತ್ತಿದ್ದರು. ಈಗ ನಾವು ಸುಸ್ಥಿರ ಅಭಿವೃದ್ಧಿಗೆ ಹೆಚ್ಚು ಒತ್ತು ಕೊಟ್ಟು ನೆಲ-ಜಲ ನಿಸರ್ಗದ ಕುರಿತು ಚಿಂತನ ಮಂತನ ಮಾಡುವ ಅಗತ್ಯವಿದೆಯೆಂದರು. ನವ ಉದಾರೀಕರಣ,ಅರ್ಥಶಾಸ್ತ್ರದಿಂದಪಾಶ್ಚಾತ್ಯ ರಾಷ್ಟ್ರಗಳು,ನೈಸರ್ಗಿಕಮೂಲಗಳನ್ನು ಖಾಲಿ ಮಾಡುತ್ತಿದೆ. ಭಾರತೀಯ ಅರ್ಥಶಾಸ್ತ್ರ ಸುಸ್ಥಿರ ಅಭಿವೃದ್ಧಿಗೆ ಮಹತ್ವ ನೀಡಿದೆ-ಯೆಂದರು.

ವಲಯ ಅರಣ್ಯ ಸಂರಕ್ಷಣಾಧಿಕಾರಿಪ್ರದೀಪ ಪವಾರ, ರಾಷ್ಟ್ರೀಯ ವಿಧಿ ವಿಜ್ಞಾನ ವಿಶ್ವವಿದ್ಯಾಲಯದ ನಿರ್ದೇಶಕ ಡಾ. ಮಂಜುನಾಥ ಘಾಟೆ, ಮಲಪ್ರಭಾ ಅಚ್ಚುಕಟ್ಟು ಪ್ರದೇಶದ ರೈತರು ಮತ್ತು ಜಲ ಸಂಪನ್ಮೂಲ ಇಲಾಖೆಯ ಅಭಿಯಂತರರು ಮತ್ತು ವಾಲ್ಮಿ ಸಂಸ್ಥೆಯ ಬೋಧಕ ಮತ್ತು ಬೋಧ-ಕೇತರ ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಕರಾವಳಿ ಭಾಗದಲ್ಲಿ ವ್ಯಾಪಕ ಮಳೆ, ಕಾಳಜಿ ಕೇಂದ್ರಗಳಲ್ಲಿ ಜನರಿಗೆ ಆಶ್ರಯ

**ಕಾರವಾರ :** ಜಿಲ್ಲೆಯಲ್ಲಿ ಕರಾವಳಿ ಭಾಗದಲ್ಲಿ ವ್ಯಾಪಕ ಮಳೆಯಾಗಿದ್ದು, ಹೊನ್ನಾವರ ತಾಲ್ಲೂಕಿನಲ್ಲಿ ತೆರೆಯಲಾದ 8 ಕಾಳಜಿ ಕೇಂದ್ರಗಳಲ್ಲಿ 313 ಮಂದಿ ಆಶ್ರಯ ಪಡೆದಿದ್ದು, ಅವರಿಗೆ ಎಲ್ಲಾ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಲಕ್ಷ್ಮೀಪ್ರಿಯಾ ತಿಳಿಸಿದ್ದಾರೆ.

ಈ ಬಗ್ಗೆ ಮಾಧ್ಯಮಗಳಿಗೆ ಮಾಹಿತಿ ನೀಡಿರುವ ಅವರು, ಮುನ್ನೆಚ್ಚರಿಕೆಯ ಕ್ರಮವಾಗಿ ಕುಮಟಾ ಹಾಗೂ ಹೊನ್ನಾವರ ತಾಲೂಕುಗಳಲ್ಲಿನ ಶಾಲಾ ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಜಿಲ್ಲೆಯಲ್ಲಿ ತೀವ್ರ ಮಳೆಯಿಂದ ತೊಂದರೆಗೊಳಗಾದ ವಿವಿಧ ಗ್ರಾಮಗಳ ಸಾರ್ವಜನಿಕರಿಗೆ ಅಗತ್ಯವಿದ್ದಲ್ಲಿ ಇನ್ನೂ ಹೆಚ್ಚಿನ ಕಾಳಜಿ ಕೇಂದ್ರಗಳನ್ನು ತೆರೆಯುವಂತೆ ಸಂಬ0ಧಪಟ್ಟ ತಾಲೂಕುಗಳ ತಹಶೀಲ್ದಾರ್‌ಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದ್ದಾರೆ.

ಕಾಳಜಿ ಕೇಂದ್ರಗಳಲ್ಲಿ ಆಶ್ರಯ ಪಡೆದಿರುವವರಿಗೆ ಎಲ್ಲಾ ಅಗತ್ಯ ಮೂಲಭೂತ ಸೌಕರ್ಯಗಳೊಂದಿಗೆ ಊಟದ ವ್ಯವಸ್ಥೆ ಮತ್ತು ರಾತ್ರಿ ತಂಗಲು ಅಗತ್ಯವಿರುವ ಎಲ್ಲಾ ಸೌಕರ್ಯಗಳನ್ನು




ಒದಗಿಸಲಾಗಿದ್ದು, ವೈದ್ಯರ ತಂಡದಿಂದ ಆರೋಗ್ಯ ಪರಿಶೀಲನೆ ಮತ್ತು ಅಗತ್ಯವಿರುವ ಔಷಧ ಸೌಲಭ್ಯವನ್ನು ಒದಗಿಸಲಾಗಿದೆ. ಕದ್ರಾ ಜಲಾಶಯದಲ್ಲಿ ನೀರಿನ ಮಟ್ಟವು ಜಿಲ್ಲಾಡಳಿತ ನಿಗಧಿಪಡಿಸಿದ ಮಟ್ಟಕ್ಕಿಂತ ಹೆಚ್ಚಾದ ಹಿನ್ನೆಲೆಯಲ್ಲಿ ಜಲಾಶಯದಿಂದ 10600 ಕ್ಯೂಸೆಕ್ಸ್ ನೀರನ್ನು ಹೊರಬಿಡಲಾಗುತ್ತಿದೆ.

ಜಿಲ್ಲೆಯಲ್ಲಿ ಕಳೆದ 24 ಗಂಟೆಗಳಲ್ಲಿ 2 ಮನೆಗಳಿಗೆ ತೀವ್ರ ಹಾನಿ ಹಾಗೂ 13 ಮನೆಗಳಿಗೆ ಭಾಗಶಃ ಹಾನಿಯಾಗಿದೆ. ಎಂದವರು ಹೇಳಿದ್ದಾರೆ.

ಹೊನ್ನಾವರ ತಾಲ್ಲೂಕಿನ ಕಡತೋಕಾ ಗ್ರಾಮದ ಗುದ್ನಕಟ್ಟು ಮಜಿರೆಯು ನೀರಿನ ಹರಿವು ಜಾಸ್ತಿ ಆಗಿದ್ದು, ಇಲ್ಲಿನ ನೇರಪೀಡಿತ ಪ್ರದೇಶದಲ್ಲಿನ 60 ಜನರನ್ನು ಓಆಖಈ ತಂಡದ ಮೂಲಕ ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ. ಜಿಲ್ಲೆಯಲ್ಲಿ ಮಳೆಯಿಂದ ಯಾವುದೇ ಮಾನವ ಜೀವ ಹಾನಿಯಾಗದಂತೆ ಎಲ್ಲಾ ರೀತಿಯ ಗರಿಷ್ಠ ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸುವಂತೆ ಎಲ್ಲಾ ಅಧಿಕಾರಿಗಳಿಗೆ ಸೂಚಿಸಲಾಗಿದ್ದು, ಜಾನುವಾರು ಪ್ರಾಣ ಹಾನಿ ತಡೆಗೂ ಅಗ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ. ಸಾರ್ವಜನಿಕರು ಯಾವುದೇ ಸಮಸ್ಯೆಗಳಲ್ಲಿ ಜಿಲ್ಲಾಡಳಿತದ ಉಚಿತ ತುರ್ತು ಸಹಾಯವಾಣಿ ಸಂಖ್ಯೆ 1077 ಗೆ ಹಾಗೂ ಮೊ.ಸಂ. ಸಂಖ್ಯೆ 94835 11015 ಕರೆ , ಮೆಸೇಜ್, ವಾಟ್ಸಾಪ್ ಸಂದೇಶ ಮತ್ತು ವಾಟ್ಸಾಪ್ ಕರೆ ಮಾಡಿ ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿ ಲಕ್ಷ್ಮೀಪ್ರಿಯಾ ತಿಳಿಸಿದ್ದಾರೆ.

# 2ಎ ಮೀಸಲಾತಿಗಾಗಿ ಯಾವ ತ್ಯಾಗಕ್ಕೂ ಸಿದ್ಧ: ಶಾಸಕ ರಾಜು ಕಾಗೆ



**ಕಾಗವಾಡ :** 'ಪಂಚಮಸಾಲಿ ಸಮುದಾಯಕ್ಕೆ ಪ್ರವರ್ಗ '2ಎ' ಮೀಸಲಾತಿ ಪಡೆಯುವುದಕ್ಕಾಗಿ ನಾನು ಯಾವ ಹುದ್ದೆ ತ್ಯಜಿಸಲೂ ಸಿದ್ಧ' ಎಂದು ಕಾಂಗ್ರೆಸ್ ಶಾಸಕ ರಾಜು ಕಾಗೆ ಹೇಳಿದರು.

ಸಮೀಪದ ಉಗಾರ ಖುರ್ದ್ ಗ್ರಾಮದಲ್ಲಿ ಸೋಮವಾರ ನಡೆದ ಮೀಸಲಾತಿಗಾಗಿ ಹೋರಾಟ ಪೂರ್ವಭಾವಿ ಸಭೆಯಲ್ಲಿ ಮನವಿ ಸ್ವೀಕರಿಸಿ ಮಾತನಾಡಿದ ಅವರು, 'ಮೀಸಲಾತಿ ಪಡೆಯಲು ಪಂಚಮಸಾಲಿ ಸಮುದಾಯದ ಎಲ್ಲ ಶಾಸಕರು ಪಕ್ಷಾತೀತವಾಗಿ ರಾಜೀನಾಮೆ ನೀಡಿದರೆ, ಯಾವುದೇ ಸರ್ಕಾರವಿದ್ದರೂ ಮಂಡಿ ಊರಬೇಕಾಗುತ್ತದೆ. ಮೀಸಲಾತಿಗಾಗಿ ನಾನು ಎಂಥ ತ್ಯಾಗವನ್ನೂ ಮಾಡಲು ಸಿದ್ಧವಿದ್ದೇನೆ' ಎಂದರು.

ಕೂಡಲಸಂಗಮ ಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ, 'ನಾವು ಅನ್ಯ ಸಮುದಾಯಗಳ ವಿರೋಧಿಗಳಲ್ಲ. ಶೈಕ್ಷಣಿಕವಾಗಿ ಹಿಂದುಳಿದ ನಮ್ಮ ಸಮುದಾಯಕ್ಕೂ ಮೀಸಲಾತಿ ನೀಡಬೇಕು ಎಂಬುದು ನಮ್ಮ ಬೇಡಿಕೆ. ಮೀಸಲಾತಿ ವಿಚಾರವಾಗಿ ವಿಧಾನಸಭೆ ಅಧಿವೇಶನದಲ್ಲಿ ಧ್ವನಿ ಎತ್ತುವಂತೆ ಕೋರಲು, ರಾಜು ಕಾಗೆ ಅವರ ಮನೆಗೆ ಆಗಮಿಸಿ ಮನವಿ ನೀಡುವ ಅಭಿಯಾನ ಹಮ್ಮಿಕೊಂಡಿದ್ದೇವೆ' ಎಂದು ಹೇಳಿದರು.

ಆರ್.ಕೆ.ಪಾಟೀಲ, ನಿಂಗಪ್ಪ ಪೀರೋಜೆ, ಮೃಣಾಲ್ ಹೆಬ್ಬಾಳಕರ ಇತರರಿದ್ದರು.

# ಮಹದಾಯಿ ಜಲಾನಯನ ಪ್ರದೇಶಕ್ಕೆ ಕೇಂದ್ರದ ಪ್ರವಾಹ ತಂಡ ಭೇಟಿ, ಪರಿಶೀಲನೆ

**ಬೆಳಗಾವಿ :** ಮಹದಾಯಿ ಜಲಾನಯನ ಪ್ರದೇಶಕ್ಕೆ ಕೇಂದ್ರದ ಪ್ರವಾಹ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಇಲ್ಲಿನ ಅಧಿಕಾರಿಗಳಿಂದ ವಸ್ತುಸ್ಥಿತಿ ಬಗ್ಗೆ ಮಾಹಿತಿಯನ್ನು ಪಡೆದುಕೊಂಡಿತು.

ಮೊದಲು ಚೋರ್ಲಾ ಘಾಟ್ ಮತ್ತು ಹರತಾಳ ನಾಲಾವನ್ನು ವೀಕ್ಷಣೆ ಮಾಡಿದ್ದ ಕೇಂದ್ರದ ಪ್ರವಾಹ ತಂಡದವರು, ಆ ಬಳಿಕ ಖಾನಾಪುರ ತಾಲೂಕಿನ ಕಣಕುಂಬಿಯ ಅತಿಥಿ ಗೃಹದಲ್ಲಿ ರಾಜ್ಯದ ನೀರಾವರಿ ಅಧಿಕಾರಿಗಳ ಜೊತೆಗೆ ಸಭೆ ನಡೆಸಿದರು. ಈ ವೇಳೆ ಮ್ಯಾಪ್ ಸಮೇತ ಕಳಸಾ, ಬಂಡೂರಿ ಯೋಜನೆಯ ಬಗ್ಗೆ ಅಧಿಕಾರಿಗಳು ಅವರಿಗೆ ಮಾಹಿತಿ ನೀಡಿದರು. ನಂತರ ಕಳಸಾ, ಬಂಡೂರಿ ಯೋಜನೆ ಸ್ಥಳಕ್ಕೂ ಕೇಂದ್ರದ ತಂಡ ಭೇಟಿ ನೀಡಿತು. ಕೇಂದ್ರ ತಂಡ ಪ್ರವಾಹ ಭೇಟಿ ನೀಡಿ ಪರಿಶೀಲಿಸಿದ ನಂತರ ಕರ್ನಾಟಕ ನೀರಾವರಿ ನಿಗಮದ ಎಂಡಿ ರಾಜೇಶ ಅಮ್ಮಿನಭಾವಿ



ಮಾಧ್ಯಮದವರ ಜೊತೆಗೆ ಮಾತನಾಡಿದರು. "ಒಟ್ಟು 8 ಜನರ ತಂಡ ಕೇಂದ್ರದಿಂದ ಬಂದು ಭೇಟಿ ಮಾಡಿದೆ. ಮಹದಾಯಿ ಜಲಾನಯನ ಪ್ರದೇಶದಲ್ಲಿ ಏನೇನು ಆಗುತ್ತಿದೆ ಎಂಬುದರ ಪರಿಶೀಲನೆಗೆ ಈ ತಂಡ ಬಂದಿತ್ತು. ಗೋವಾದಲ್ಲಿ ಎರಡು ದಿನ, ಮಹಾರಾಷ್ಟ್ರದಲ್ಲಿ ಎರಡು ದಿನಗಳ ಭೇಟಿಯ ನಂತರ ನಮ್ಮ ರಾಜ್ಯಕ್ಕೆ ಬಂದಿದೆ. ಇದೊಂದು ಭೇಟಿ ಮಾತ್ರ ಎಂದ ಅವರು, ಕರ್ನಾಟಕದ ಬಣ್ಣ ಬಯಲಾಗಲಿದೆ ಎಂಬ ಗೋವಾ ಮುಖ್ಯಮಂತ್ರಿ ಪ್ರಮೋದ ಸಾವಂತ ಟ್ವೀಟ್ ವಿಚಾರದ ಬಗ್ಗೆ ನನಗೆ ಗೊತ್ತಿಲ್ಲ. ಕಾಮಗಾರಿಗಳ ಬಗ್ಗೆ ಯಾವುದೇ ನಿರ್ಧಾರ ತೆಗೆದುಕೊಳ್ಳುವ ತಂಡ ಇದಲ್ಲ" ಎಂದು ಉತ್ತರಿಸಿದರು.

ಬೆಳಗಾವಿ ಜಿಲ್ಲೆಯ ಖಾನಾಪುರ ತಾಲೂಕಿನ ಕಣಕುಂಬಿಗೂ ಭೇಟಿ ನೀಡಿದ ಕೇಂದ್ರದ ಪ್ರವಾಹ ತಂಡದವರು ಕಳಸಾ, ಬಂಡೂರಿ ಯೋಜನೆ ಬಗ್ಗೆ ಇಲ್ಲಿನ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು. ಕೇಂದ್ರ ತಂಡ ಬಂದಿದ್ದು, ನಮ್ಮ ರಾಜ್ಯ-ಕ್ಕೆ ಅನುಕೂಲ ಆಗಲಿದೆಯಾ? ಎಂಬ ಮಾಧ್ಯಮದವರ ಪ್ರಶ್ನೆಗೆ, ಅಣ್ಣ.. ಎಂದು ಕೈ ಮುಗಿದು, ಅಲ್ಲಿಂದ ರಾಜೇಶ ಅಮ್ಮಿನಭಾವಿ ಹೊರಟು ಹೋದರು.

**ಬರಮಾಡಿಕೊಂಡ ಪೊಲೀಸರು:** ಮಹದಾಯಿ ಜಲಾನಯನ ಪ್ರದೇಶಗಳಿಗೆ ಭೇಟಿ ನೀಡಿದ ಕೇಂದ್ರದ ಪ್ರವಾಹ ತಂಡವನ್ನು ಜಿಲ್ಲೆಯ ಚೋರ್ಲಾ ಗಡಿಯಲ್ಲಿ ತಂಡವನ್ನು ನೀರಾವರಿ ಅಧಿಕಾರಿಗಳು ಹಾಗೂ ಸ್ಥಳೀಯ ಪೊಲೀಸರು ಬರಮಾಡಿ ಕೊಂಡರು. ಮಹದಾಯಿ ಹೋರಾಟಗಾರರ ವಿರೋಧದ ನಡುವೆಯೂ ಬೆಳಗಾವಿಗೆ ಈ ತಂಡ ಆಗಮಿಸಿದೆ. ಗೋವಾ ಸರ್ಕಾರದ ಒತ್ತಾಯದ ಮೇರೆಗೆ ಪ್ರವಾಹ ತಂಡವನ್ನು ಕೇಂದ್ರ ಸರ್ಕಾರ ರಚಿಸಿತ್ತು.

ಪ್ರವಾಹ ತಂಡದ ಭೇಟಿಗೂ ಮುನ್ನ ಟ್ವೀಟ್ ಮಾಡಿದ್ದ ಗೋವಾ ಸಿಎಂ ಪ್ರಮೋದ ಸಾವಂತ, ಅನುಮತಿ ಇಲ್ಲದೇ ಕರ್ನಾಟಕ ಮಹದಾಯಿ ಕಾಮಗಾರಿ ಆರಂಭಿಸಿದೆ ಎಂದು ಆರೋಪಿಸಿದ್ದರು.

# ಬೈಲಹೊಂಗಲ | ಮೊಹರಂ ಸಿದ್ಧತೆ: ಚಿನಕೋಲು, ಹುಲಿಕುಣಿತದ ಸದ್ದು ಬೈಲಹೊಂಗಲ ತಾಲ್ಲೂಕಿನ ವಕ್ಕುಂದ ಗ್ರಾಮದಲ್ಲಿ ಮೊಹರಂ ಸಿದ್ಧತೆ



**ಬೈಲಹೊಂಗಲ :** ಸರ್ವಧರ್ಮ ಸಮನ್ವಯದ ಸಂದೇಶ ಸಾರುವ ಮೊಹರಂ ಹಬ್ಬದ ಸಂಭ್ರಮದ ಆಚರಣೆಗಾಗಿ ತಾಲ್ಲೂಕಿನ ವಕ್ಕುಂದ ಗ್ರಾಮದಲ್ಲಿ ಈಗಾಗಲೇ ತಯಾರಿ ಶುರುವಾಗಿದೆ.

ವಾಲ್ಮೀಕಿ ಸಮಾಜದ ಯುವ ಪಡೆ ಹಾಗೂ ಎಲ್ಲ ಸಮಾಜದವರು ಸೇರಿಕೊಂಡು ಹಬ್ಬದ ಆಚರಣೆಗೆ ಭರದ ಸಿದ್ಧತೆ ನಡೆಸಿದ್ದಾರೆ.

ಚಿನಕೋಲು, ಹುಲಿಕುಣಿತದ ತಯಾರಿ: ವಾಲ್ಮೀಕಿ ಸಮಾಜದ ಯುವ ಪಡೆಯ 20ಕ್ಕೂ ಹೆಚ್ಚಿನ ಜನ ಸದಸ್ಯರು ಕಾಲಿಗೆ ಗೆಜ್ಜೆ ಕಟ್ಟಿಕೊಂಡು, ಹಿರಿಯರ ಮಾರ್ಗದರ್ಶನದಂತೆ ಮೊಹರಂ ಗೀತೆಗಳಿಗೆ ಹೆಜ್ಜೆ ಹಾಕುತ್ತಿದ್ದಾರೆ. ವಕ್ಕುಂದದ ಸುತ್ತಲಿನ ಜನರೂ ಮೊಹರಂ ತಯಾರಿಯ ಸೊಬಗು ಕಾರಣ ಗ್ರಾಮಕ್ಕೆ ಬರುತ್ತಿದ್ದಾರೆ. ಜುಲೈ 17ರಂದು ಹಬ್ಬದ ಆಚರಣೆಯಲ್ಲಿ ಹುಲಿಕುಣಿತ, ಹಲಗೆ ವಾದನ, ಮೊಹರಂ ಪದಗಳ ಜನರನ್ನು ಆಕರ್ಷಿಸಲಿವೆ.

# ಡೆಂಗಿ: ಸಮಗ್ರ ಮಾಹಿತಿಗೆ ಸಂಸದ ಜಗದೀಶ ಶೆಟ್ಟರ್ ಸೂಚನೆ

**ಬೆಳಗಾವಿ :** 'ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಡೆಂಗಿಗೆ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳ ಸಂಖ್ಯೆ ಕಡಿಮೆ ಇದೆ. ಹಾಗಾಗಿ ಜಿಲ್ಲೆಯ ಖಾಸಗಿ ಆಸ್ಪತ್ರೆಗಳಲ್ಲಿ ಈ ಕಾಯಿಲೆಗೆ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳ ಬಗ್ಗೆ ಮಾಹಿತಿ ಸಂಗ್ರಹಿಸುವಂತೆ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ' ಎಂದು ಸಂಸದ ಜಗದೀಶ ಶೆಟ್ಟರ್ ಹೇಳಿದರು.

ಇಲ್ಲಿನಜಿಲ್ಲಾಸ್ಪತ್ರೆಗೆಮಂಗಳವಾರಭೇಟಿನೀಡಿ ಡೆಂಗಿ ಕಾಯಿಲೆಯಿಂದ ಬಳಲುತ್ತಿರುವವರ ಆರೋಗ್ಯ ವಿಚಾರಿಸಿ, ಅಧಿಕಾರಿಗಳೊಂದಿಗೆ ಸಭೆ ನಡೆಸಿದ ನಂತರ ಸುದ್ದಿಗಾರರ ಜತೆ ಅವರು ಮಾತನಾಡಿದರು.

'ಜಿಲ್ಲಾಸ್ಪತ್ರೆಯಲ್ಲಿ 189 ರೋಗಿಗಳು ಡೆಂ-ಗಿಗೆ ಚಿಕಿತ್ಸೆ ಪಡೆದಿದ್ದಾರೆ ಎಂದು ಬಿಮ್ಸ್ ಅಧಿಕಾರಿಗಳು ಹೇಳಿದ್ದಾರೆ. ಜಿಲ್ಲೆಯಲ್ಲಿ 177 ಡೆಂಗಿ ಪ್ರಕರಣ ಪತ್ತೆಯಾಗಿವೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ತಿಳಿಸಿದ್ದಾರೆ. ಈ ವ್ಯತ್ಯಾಸದ ಬಗ್ಗೆ ಇಬ್ಬರನ್ನೂ ವಿಚಾರಿಸಿದಾಗ, ಜಿಲ್ಲಾಸ್ಪತ್ರೆಯಲ್ಲಿಚಿಕಿತ್ಸೆಪಡೆಯುತ್ತಿರುವವರಲ್ಲಿ ಗೋವಾ ಮತ್ತು ಮಹಾರಾಷ್ಟ್ರದ ರೋಗಿಗಳೂ ಇದ್ದಾರೆ. ಅವರನ್ನು ಜಿಲ್ಲೆಯ ಡೆಂಗಿ ಪ್ರಕರಣಗಳ ಪಟ್ಟಿಯಲ್ಲಿ ಸೇರಿಸಿಲ್ಲ ಎಂದಿದ್ದಾರೆ. ಮಳೆ ಹಿನ್ನೆಲೆಯಲ್ಲಿ ಜೂನ್, ಜುಲೈನಲ್ಲಿ ಡೆಂಗಿ ಪ್ರಕರಣ ಹೆಚ್ಚಿವೆ. ಈ



ಕಾಯಿಲೆಯಿಂದ ಬಳಲುತ್ತಿರುವವರಿಗೆ ಅಗತ್ಯ ಚಿಕಿತ್ಸೆ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ' ಎಂದರು.

'ಡೆಂಗಿಸಾಂಕ್ರಾಮಿಕವಲ್ಲದಕಾಯಿಲೆ.ಹಾಗಾಗಿ ರೋಗಿಗಳಿಗೆಪ್ರತ್ಯೇಕವಾರ್ಡ್‌ಗಳಅಗತ್ಯವಿಲ್ಲ. ಡೆಂಗಿಕಾಯಿಲೆಯಿಂದಬಳಲುತ್ತಿರುವವರಿಗೆ ಇತರೆ ರೋಗಿಗಳೊಂದಿಗೆ ಚಿಕಿತ್ಸೆ ನೀಡಬಹುದು. ಸ್ಥಳೀಯ ಸಂಸ್ಥೆಗಳು ಸ್ವಚ್ಛತೆ ಕಾಪಾಡುತ್ತವೆ. ಆದರೆ, ಎಲ್ಲವನ್ನೂ ಸರ್ಕಾರದಿಂದಲೇ ಮಾಡಲಾಗದು. ಜನರೂ ತಮ್ಮ ಮನೆಗಳ ಬಳಿ ನೈರ್ಮಲ್ಯ ಕಾಪಾಡಿಕೊಳ್ಳಬೇಕು.ಶುಚಿತ್ವಕ್ಕೆಒತ್ತುಕೊಟ್ಟ-ರೆ, ಸೊಳ್ಳೆಗಳ ಉತ್ಪತ್ತಿ ತಡೆಯಬಹುದು. ಈ ಕಾಯಿಲೆ ತಡೆಗಟ್ಟಬಹುದು ಮತ್ತು ನಿಯಂತ್ರಿಸಬಹುದು' ಎಂದು ಹೇಳಿದರು.

'ರಾಜ್ಯದಾದ್ಯಂತ ಡೆಂಗಿ ಪ್ರಕರಣ ಹೆಚ್ಚಿವೆ. ಆದರೆ,ವೈದ್ಯಕೀಯತುರ್ತುಪರಿಸ್ಥಿತಿಎಂದು ಘೋಷಿಸುವ ಪರಿಸ್ಥಿತಿ ಉದ್ಭವಿಸಿಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಆದರೆ, ಅದನ್ನು ಘೋಷಿಸಿ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು' ಎಂದು ಒತ್ತಾಯಿಸಿದರು. 'ನೆರೆಯ ಮಹಾರಾಷ್ಟ್ರದಲ್ಲಿ ಝಿಕಾ ಸೋಂಕಿನ ಪ್ರಕರಣ ಪತ್ತೆಯಾಗಿವೆ. ಹಾಗಾಗಿ ಈ ಪರಿಸ್ಥಿತಿ ನಿಗಾ ಇರಿಸಲು ಮತ್ತು ಡೆಂಗಿ ನಿಯಂತ್ರಣಕ್ಕಾಗಿ ತರಲು ಜಿಲ್ಲೆ ಹಾಗೂ ತಾಲ್ಲೂಕುಮಟ್ಟದಲ್ಲಿ ಕಾರ್ಯ ಪಡೆಗಳನ್ನು ರಚಿಸುವ ಅಗತ್ಯವಿದೆ' ಎಂದು ಹೇಳಿದರು.

ಬಿಮ್ಸ್ ನಿರ್ದೇಶಕ ಡಾ.ಅಶೋಕಕುಮಾರ ಶೆಟ್ಟಿ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಮಹೇಶ ಕೋಣಿ, ಮಾಜಿ ಶಾಸಕ ಸಂಜಯ ಪಾಟೀಲ, ಬಿಜೆಪಿ ಗ್ರಾಮೀಣ ಜಿಲ್ಲಾ ಘಟಕದ ಅಧ್ಯಕ್ಷ ಸುಭಾಷ ಪಾಟೀಲ ಇದ್ದರು.

**ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಕುಸಿತ':** 'ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಕುಸಿದಿದ್ದು, ಅಧಿಕಾರಿಗಳು ತಮ್ಮ ಮನಸ್ಸಿಗೆ ಬಂದಂತೆ ಕೆಲಸ ಮಾಡುತ್ತಿದ್ದಾರೆ. ಸೋಮವಾರ ನಡೆದ ಪರಿಶೀಲನಾ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಜಿಲ್ಲಾಧಿಕಾರಿಗಳಿಗೆ ಎಚ್ಚರಿಕೆ ನೀಡಿರುವುದು ಇದರ ಸೂಚನೆಯಾಗಿದೆ' ಎಂದು ಸಂಸದ ಜಗದೀಶ ಶೆಟ್ಟರ್ ದೂರಿದರು.

ಇಲ್ಲಿ ಮಂಗಳವಾರ ಸುದ್ದಿಗಾರರೊ ಂದಿಗೆ ಮಾತನಾಡಿದ ಅವರು, 'ರಾಜ್ಯದಲ್ಲಿ ಸರ್ಕಾರಿ ಯಂತ್ರಗಳುನಿಷ್ಕ್ರಿಯವಾಗಿವೆ.ಎಲ್ಲಜಿಲ್ಲೆಗಳಲ್ಲಿ ಆಡಳಿತಕುಸಿದಿದ್ದು,ಜಿಲ್ಲಾಧಿಕಾರಿಗಳು,ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಳು ಎಚ್ಚೆತ್ತುಕೊಂಡು ಕೆಲಸ ಮಾಡಬೇಕಿದೆ' ಎಂದು ಹೇಳಿದರು.

'ಜಿಲ್ಲೆಯಲ್ಲೂ ಭಾರಿ ಮಳೆಯಾಗುತ್ತಿದ್ದು, ನದಿಗಳಲ್ಲಿ ನೀರಿನ ಸಂಗ್ರಹ ಮಟ್ಟ ಏರಿ-ಕೆಯಾಗುತ್ತಿದೆ. ಆದರೆ, ಅಧಿಕಾರಿಗಳು ಸಕ್ರಿಯವಾಗಿಕೆಲಸಮಾಡದಿರುವುದುಅವರ ಕಾರ್ಯವೈಖರಿ ತೋರಿಸುತ್ತದೆ. ಪ್ರಕೃತಿ ವಿಕೋಪದ ಸಂದರ್ಭ ಜಿಲ್ಲಾಡಳಿತ ಮತ್ತು ಜಿಲ್ಲಾಉಸ್ತುವಾರಿಸಚಿವರುಕ್ರಿಯಾಶೀಲರಾಗಿ ಕೆಲಸ ಮಾಡಿ, ಜನರ ಕುಂದುಕೊರತೆಗಳಿಗೆ ಸ್ಪಂದಿಸಬೇಕು' ಎಂದರು.

